ಸಂಪುಟ : 9 ಸಂಚಿಕೆ 153 ಪುಟ : 4 ಬೆಲೆ: 3.00 ಮಂಗಳವಾರ ಜುಲೈ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 153 Pages : 4 Price : 3.00 Tuesday July 23 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜುಲೈ 23ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ವಿಜಯನಗರ ಶಾಲೆ, ವಾಲ್ಮೀಕಿ ಭವನ, ಕರುಗಲ್ ಲೇಔಟ್, ಶಿಗ್ಗಾವಿ ಲೇಔಟ್, ಟವರ್ ಕಂಬ, ಕಮತರ ಪ್ಲಾಟ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ರಾಜೀವ ಗಾಂಧಿ ನಗರ ಡಂಬಳದವರ ಲೈನ್, ಪೊಲೀಸ್ ಸ್ಟೇಷನ್, ಜೋಪಡಿ ಲೈನ್, ಶರೀಫ್ ಶಾಲೆ, ಉರ್ದು ಶಾಲೆ, ಮಸೂತಿ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ 34, 35 ಗಾರ್ಡನ್ ಲೈನ್, ವಡ್ಡರಗೇರಿ 46 ಪ್ಲಾಟ್, ಈಶ್ವರ ಗುಡಿ ಲೈನ್ 1, 2, 3 ನೇ ಕ್ರಾಸ್ ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 17, 18, 19, 25 ವೀ ಅಂಡ್ ಟಿ ರೋಡ್, ಮದ್ಲಿ ಓಣಿ ಹೊಸ ಲೈನ್, ಕೋನೇರಿ ಹೊಂಡ ಹಳೆ ಲೈನ್, ಚವ್ಹಾಣದವರ ಲೈನ್, ಬಳಿಗಾರ ಲೈನ್, ಮಣ್ಣಮ್ಮನವರ ಲೈನ್, ಹಾವನೂರ ಲೈನ್, ಮೀನಿನ ಮಾರ್ಕೆಟ್, ನಮಾಜಿಯವರ ಲೈನ್.

ವಾರ್ಡ್ ನಂ 28 ದೇವಗಿರಿ ಲೈನ್, ಸಂತೋಷ ಕಿರಾಣಿ ಅಂಗಡಿ, ಎಸ್ ಎಸ್ ಪಾಟೀಲರ ಲೈನ್, ಕೊರ್ಲಹಳ್ಳಿ ಲೈನ್, ಅಬ್ಬಿಗೇರಿ, ಕಾಗದಗಾರ, ಅಪಾರ್ಟ್ಮೆಂಟ್, ಕಟ್ಟಿಯವರ, ಕೃಷ್ಣ ಟ್ಯೂಶನ್ ಲೈನ್, ಸೊಲ್ಲಾಪಟ್ಟಿ ಲೈನ್, ಗವಾಯಿಗಳ ಆಶ್ರಮ ಮುಂದಿನ ಭಾಗ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ವಾಲ್ಮೀಕಿ ನಿಗಮದಲ್ಲಿ ಅವ್ಯವಹಾರ ಆರೋಪ । ಸ್ಪಷ್ಟೀಕರಣಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

# ವಾಲ್ಮೀಕಿ ನಿಗಮದ ಹಗರಣ ಮುಖ್ಯಮಂತ್ರಿಗಳೇ ಸ್ಪಷ್ಟಪಡಿಸಲಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ/ಹಾವೇರಿ

ವಾಲ್ಮೀಕಿ ನಿಗಮಕ್ಕೆ ಸಂಬಂಧಿಸಿದ ಸುಮಾರು 40 ಕೋಟಿ ರೂ. ಹಣ ನೇರವಾಗಿ ರಾಜ್ಯ ಸರ್ಕಾರದ ಖಜಾನೆಯಿಂದ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿರುವ ಬಗ್ಗೆ ಮಾಹಿತಿ ಇದ್ದು, ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟೀಕರಣ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಗರಣದ ಆಳ ಮತ್ತು ಅಗಲ ನೋಡಿದರೆ ಹೊಸ ಹೊಸ ತಿರುವುಗಳಿಗೆ ಕಾರಣವಾಗುತ್ತಿದೆ. ಇದಕ್ಕೆ ಅಂತ್ಯವೇ ಇಲ್ಲ ಎಂಬ ಭಾವನೆ, ಅಭಿಪ್ರಾಯ ವ್ಯಕ್ತವಾಗುತ್ತಿದೆ. ಈಗಾಗಲೇ ಹಲವಾರು ಬ್ಯಾಂಕ್ ಖಾತೆಗಳನ್ನು ತೆರೆದು



ಹೈದರಾಬಾದ್‌ಗೆ ಹಣ ವರ್ಗಾವಣೆಯಾಗಿರುವ ಬಗ್ಗೆ ವಿವರಗಳು ಬೆಳಕಿಗೆ ಬಂದಿವೆ. ಆದರೆ, ಅದು ಹಣಕಾಸು ಇಲಾಖೆಗೆ ಸಂಬಂಧಿಸಿದ ವಿಷಯವಲ್ಲ ಎಂದು ಮುಖ್ಯಮಂತ್ರಿಗಳು ಹೇಳುತ್ತಾರೆ.

ಆದರೆ, ನಮಗೆ ಇತ್ತೀಚೆಗೆ ಒಂದು ಮಾಹಿತಿ ಬಂದಿದೆ. ಮಾರ್ಚ್ 31ರಂದು ನೇರವಾಗಿ ರಾಜ್ಯ ಸರ್ಕಾರದ ಖಜಾನೆಯಿಂದಲೇ ಸುಮಾರು 40 ಕೋಟಿ ರೂ. ಅಧಿಕೃತ ಖಾತೆಗೆ ಹೋಗದೇ ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆಯಾಗಿದೆ ಎಂಬ ಮಾಹಿತಿ ಇದೆ. ಇದು ಹೇಗೆ ಹೊರಗೆ ಬಂದಿದೆ ಎಂದರೆ, ಪೇಮೆಂಟ್ ಮಾಡಿರುವ ಚಲನ್ ಅನ್ನು ಕಂಪ್ಯೂಟರ್‌ನಿಂದ ತೆಗೆದು ಹಾಕುವ ಪ್ರಯತ್ನ ಮಾಡಲಾಗಿದೆ. ಆ ಹಿನ್ನೆಲೆಯಲ್ಲಿ ಖಜಾನೆಯಲ್ಲಿ ಸ್ವಲ್ಪ ಗಲಿಬಿಲಿಯಾಗಿದೆ. ಹೀಗಾಗಿ ಈ ವಿಷಯ ಹೊರಗೆ ಬಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಗೋವಿಂದ ಕಾರಜೋಳ ಹಾಜರಿದ್ದರು.

ಮುಖ್ಯಮಂತ್ರಿಗಳು ಈ ಬಗ್ಗೆ ವಿಧಾನಸಭೆಯಲ್ಲಿ ಸ್ಪಷ್ಟೀಕರಣ ನೀಡಬೇಕು. ವಾಲ್ಮೀಕಿ ನಿಗಮಕ್ಕೆ ಎಷ್ಟು ಹಣ ಬಿಡುಗಡೆಯಾಗಿದೆ, ಮಾರ್ಚ್ 31ಕ್ಕೆ ಖಜಾನೆಯಿಂದ ಹಣ ಬಿಡುಗಡೆಯಾಗಿದೆಯಾ, ಬಿಡುಗಡೆಯಾಗಿದ್ದರೆ ಯಾವ ಯಾವ ಖಾತೆಗೆ ಬಿಡುಗಡೆಯಾಗಿದೆ, ಚಲನ್ ನಾಶ ಮಾಡುವ ಪ್ರಯತ್ನ ನಡೆದಿದೆಯೋ ಇಲ್ಲವೋ ಎನ್ನುವ ಬಗ್ಗೆ ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಬೇಕು ಎಂದು ಆಗ್ರಹ ವ್ಯಕ್ತಪಡಿಸಿದರು.

## ಯಕ್ಷಗಾನ ಪ್ರದರ್ಶನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಹೋಟೆಲ್ ಒಡೆಯರ ಸಂಘ ಗದಗ ಇವರ ವತಿಯಿಂದ ಜುಲೈ 23ರ ಸಂಜೆ 6.30 ಗಂಟೆಗೆ ಗದುಗಿನ ಶ್ರೀ ವೀರನಾರಾಯಣ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಶ್ರೀ ಹಟ್ಟಿಯಂಗಡಿ ಮತ್ತು ಶ್ರೀ ಮೆಕ್ಕೆ ಕಟ್ಟು ಮೇಳದ ಆಯುಧ ಕಲಾವಿದರ ತಂಡ ಮೇಳ ಇವರಿಂದ 'ಕವಿರತ್ನ ಕಾಳಿದಾಸ' ಯಕ್ಷಗಾನ ಪ್ರದರ್ಶನ ಏರ್ಪಡಿಸಿದೆ.



ಈ ಯಕ್ಷಗಾನದಲ್ಲಿ ಪ್ರಖ್ಯಾತ ಕಲಾವಿದರಾದ ಜಲವಳ್ಳಿ ವಿದ್ಯಾಧರ ರಾವ್, ರಮೇಶ್ ಭಂಡಾರಿ, ಶಂಕರ್ ಹೆಗಡೆ, ನಾಗರಾಜ್ ಭಂಡಾರಿ, ರಾಜೇಶ್ ಭಂಡಾರಿ, ಸನ್ಮಯ್ ಭಟ್ ಮುಂತಾದ ಗಜಗಟ್ಟಿ ಮುಮ್ಮೇಳದ ಕಲಾವಿದರು ಹಾಗೂ ಹಿಮ್ಮೇಳದಲ್ಲಿ ಆಡಿ ಸಂತೋಷ್ ಕುಮಾರ್, ನೂರು ಸುಬ್ರಹ್ಮಣ್ಯ ಹೆಗಡೆ, ಪ್ರಶಾಂತ್ ಭಂಡಾರಿ ಗುಣವಂತೆ ಮುಂತಾದವರು ಭಾಗವಹಿಸಲಿದ್ದಾರೆ ಎಂದು ಸಂಘದ ಗದಗನ ಜಿಲ್ಲಾಧ್ಯಕ್ಷ ವಿಶ್ವನಾಥ ಶೆಟ್ಟಿ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

### ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ

# ಪಿಂಜಾರ-ನದಾಫ್ ನಿಗಮಕ್ಕೆ ಅನುದಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ನದಾಫ್/ಪಿಂಜಾರ ಹಾಗೂ ಇತರ 13 ಜಾತಿಗಳ ಅಭಿವೃದ್ಧಿ ನಿಗಮವನ್ನು ಸರಕಾರ ಘೋಷಿಸಿದ್ದು ಇಲ್ಲಿಯವರೆಗೆ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿಲ್ಲ. ಕೂಡಲೇ ಸಮಾಜದ ಈ ನಿಗಮಕ್ಕೆ ಅನುದಾನವನ್ನು ಮಂಜೂರು ಮಾಡಬೇಕೆಂದು ಒತ್ತಾಯಿಸಿ ಪಟ್ಟಣದಲ್ಲಿ ಸೋಮವಾರ ಪಿಂಜಾರ/ನಧಾಫ್ ಸಂಘದವರು ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ಸುಮಾರು 22-25 ಲಕ್ಷ ಜನಸಂಖ್ಯೆಯನ್ನು ಹೊಂದಿರುವ ನದಾಫ್/ಪಿಂಜಾರ ಸಮಾಜದವರು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ರಾಜಕೀಯ ಸೇರಿದಂತೆ ಹಲವಾರು ರಂಗಗಳಲ್ಲಿ ಅತ್ಯಂತ ಹಿಂದುಳಿದ ಸಮಾಜವಾಗಿದೆ. ಇದು



ಇಸ್ಲಾಂ ಪಂಗಡದಲ್ಲಿದ್ದರೂ ಸಹ ಸರಕಾರ ವೃತ್ತಿಪರ ಜಾಗತಿಗಳ ವಿಂಗಡನೆ ಅನ್ವಯ ನದಾಫ್, ಪಿಂಜಾರರನ್ನು ಉಪಪಂಗಡಕ್ಕೆ ಸೇರಿಸಿದೆ. ಇದರಿಂದ ಹಿಂದುಳಿದ ವರ್ಗಗಳ ಪ್ರವರ್ಗ-1ರ ಮೀಸಲಾತಿಯನ್ನು ಹೊಂದಿದೆ.

ಅನೇಕ ಸೌಲಭ್ಯಗಳಿಂದ ಸಮಾಜ ವಂಚಿತವಾಗುತ್ತಿರುವ ಹಿನ್ನೆಲೆಯಲ್ಲಿ ನದಾಫ್/ಪಿಂಜಾರ ಸಮಾಜಕ್ಕೆ ಪತ್ಯೇಕ ನಿಗಮ ಮಂಡಳಿ ಮಾಡಲು ಬೇಡಿಕೆ ಇಡಲಾಗಿತ್ತು. ಈ ಹಿಂದಿನ ಸರಕಾರ ಸಮಾಜದ ಸಮಸ್ಯೆಗಳನ್ನು ಗಮನಿಸಿ ಅಭಿವೃದ್ಧಿ ನಿಗಮವನ್ನು ಘೋಷಣೆ ಮಾಡಿತ್ತು. ಇದೀಗ ಹೊಸ ಸರಕಾರ ಬಂದ ನಂತರ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿಲ್ಲ. ಕೂಡಲೇ ನಿಗಮಕ್ಕೆ ಅನುದಾನ ಬಿಡುಗಡೆಗೊಳಿಸಬೇಕೆಂದು ಮುಖ್ಯಮಂತ್ರಿಗಳನ್ನು ಮನವಿ ಮೂಲಕ ಆಗ್ರಹಿಸಿದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ಎಂ.ಎಂ. ಗಾಡಗೋಳಿ, ರಮಜಾನಸಾಬ ನದಾಫ್, ಶರೀಪ್ ನದಾಫ್, ಕಲಂದರ ನದಾಫ್, ಹುಸೇನಸಾಬ ನದಾಫ್, ಖಾಜರಲಿ ನಧಾಪ್, ಅಲ್ಲಿಸಾಬ ನದಾಫ್, ನಜೀರಸಾಬ ಶರೀಪಸಾಬ ನದಾಫ್, ಹಜರುದ್ದೀನ್ ಅತ್ತಿಗೇರಿ, ದಾದಾಖಲಂದರಬಾಷಾ ನದಾಫ್, ಹಸನಸಾಬ ನದಾಫ್ ಮುಂತಾದವರಿದ್ದರು.

### ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ವಚನಗಳನ್ನು ಕಲಿಸುವ ಕಾರ್ಯವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾಶರಣ ಹಡಪದ ಅಪ್ಪಣ್ಣ ಅವರ ವಚನಗಳನ್ನು ಸಮಾಜದ ಮಕ್ಕಳಿಗೆ ಕಲಿಸುವ ಜೊತೆಗೆ ಅರ್ಥೈಸುವ ಕಾರ್ಯವಾಗಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಹಡಪದ ಅಪ್ಪಣ್ಣನವರ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿವಶರಣರ ಜಯಂತಿಗಳಲ್ಲಿ ಮಕ್ಕಳಿಗೆ ಮಹಾಶರಣರ ವಚನಗಳನ್ನು ಅರ್ಥೈಸುವ ಕೆಲಸಗಳೊಂದಿಗೆ ಸರ್ಕಾರದ ಜಯಂತಿ ಅರ್ಥಪೂರ್ಣವಾಗಲಿದೆ.



ಹಡಪದ ಅಪ್ಪಣ್ಣ ಸಮುದಾಯವು ಚಿಕ್ಕದಾದರೂ ಸಹ ಜಯಂತಿ ಕಾರ್ಯಕ್ರಮಕ್ಕೆ ಅಪಾರ ಪ್ರಮಾಣದಲ್ಲಿ ಆಗಮಿಸಿದ್ದು ಸಂತಸ ತಂದಿದೆ ಎಂದರು.

ನಗರದಲ್ಲಿ ಹಡಪದ ಅಪ್ಪಣ್ಣ ಸಮುದಾಯ ಭವನಕ್ಕೆ ಈಗಾಗಲೇ ನಿವೇಶನ ದೊರೆತು ಸಮುದಾಯ ಭವನ ಕಟ್ಟಡ ಆರಂಭವಾಗಿದೆ. ಇದಕ್ಕೆ ಅಗತ್ಯವಿರುವ ಅನುದಾನವನ್ನು ನೀಡಲಾಗುವುದು. ಮುಂದಿನ ವರ್ಷ ಇದೇ ಸಮಯಕ್ಕೆ ಸಮುದಾಯ ಭವನದ ಕಾಮಗಾರಿ ಪೂರ್ಣಗೊಳಿಸಿ ಅಲ್ಲಿಯೇ ಶಿವಶರಣ ಹಡಪದ ಅಪ್ಪಣ್ಣ ಜಯಂತಿಯನ್ನು ಆಚರಿಸುವ ವಿಶ್ವಾಸವಿದೆ ಎಂದು ಹೇಳಿದರು.

ಹಡಪದ ಅಪ್ಪಣ್ಣ ಸಂಘದ ಜಿಲ್ಲಾಧ್ಯಕ್ಷ ಮೋಹನ ಚಂದಪ್ಪನವರ ಪ್ರಾಸ್ತಾವಿಕ ಮಾತನಾಡಿದರು. ಹುಲಕೋಟಿ ಮುಖ್ಯ ಶಿಕ್ಷಕ ಎ.ವಿ. ಪ್ರಭು ಹಡಪದ ಅಪ್ಪಣ್ಣನವರ ಜೀವನ ಮತ್ತು ಸಂದೇಶದ ಕುರಿತು ಉಪನ್ಯಾಸ ನೀಡಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಎಸ್.ಎನ್. ಬಳ್ಳಾರಿ, ಕಲ್ಲಪ್ಪ ಹಡಪದ, ಬಸವರಾಜ ಕಡೆಮನಿ, ಅಶೋಕ ಮಂದಾಲಿ, ಪ್ರಭು ಬುರಬುರೆ, ಸೋಮಣ್ಣ ಹಡಪದ, ಸೋಮು ಲಮಾಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸೇರಿದಂತೆ ಇತರರು ಹಾಜರಿದ್ದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ತರಗತಿಯಲ್ಲಿ ಹೆಚ್ಚು ಅಂಕ ಪಡೆದ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು. ಸಾಧಕರಿಗೆ ಕಾಯಕ ರತ್ನ ಪ್ರಶಸ್ತಿಯನ್ನು ಸಮಾಜದಿಂದ ನೀಡಿ ಗೌರವಿಸಲಾಯಿತು.

ತ್ರಿವಿಧ ದಾಸೋಹಿ ಪೂಜ್ಯ ಶ್ರೀ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿ, ಸಮಾಜದಲ್ಲಿನ ಜಾತಿ, ಮತ, ಪಂಥ ತೊಡೆದು ಹಾಕಲು ಹೋರಾಟ ನಡೆಸಿದ ವಿಶ್ವಗುರು ಬಸವಣ್ಣನವರ ಆಪ್ತರಾಗಿದ್ದರು ಹಡಪದ ಅಪ್ಪಣ್ಣ. ಬಸವಣ್ಣನವರ ಮಹಾಮನೆಯ ಮುಖ್ಯಸ್ಥರಾಗಿ ಸಹ ಅವರು ಕಾರ್ಯ ಮಾಡಿದ್ದಾರೆ ಎಂದರು.




### ಬಿಸಿಎನ್ ಪದವಿ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ

# ಗುರಿ ಸಾಧನೆಯೆಡೆಗೆ ಗಮನವಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳು ಉನ್ನತ ಗುರಿ ಹೊಂದಿದಲ್ಲಿ ಸಾಧನೆ ಸಾಧ್ಯ. ಪ್ರಾಪಂಚಿಕ ಜ್ಞಾನ ಹಾಗೂ ಕೌಶಲ್ಯಗಳನ್ನು ರೂಢಿಸಿಕೊಳ್ಳುವ ಮೂಲಕ ದೇಶವನ್ನು ಕಟ್ಟುವ ಕೆಲಸದಲ್ಲಿ ಸಹಕಾರಿಯಾದಲ್ಲಿ ಮಾತ್ರ ವಿದ್ಯಾರ್ಥಿಗಳು ಪಡೆದ ಪದವಿಗಳಿಗೆ ಇನ್ನೂ ಹೆಚ್ಚಿನ ಮೆರಗು ಸಿಗಲಿದೆ. ಎಂದು ಬಿಸಿಎನ್ ವಿದ್ಯಾಸಂಸ್ಥೆಯ ನಿರ್ದೇಶಕ ಪ್ರಶಾಂತ ನೆಲವಿಗಿ ಹೇಳಿದರು.

ಅವರು ಪಟ್ಟಣದ ಬಿಸಿಎನ್ ಪದವಿ ಕಾಲೇಜಿನ ಸಭಾಂಗಣದಲ್ಲಿ ಬಿಸಿಎನ್ ವಿಜ್ಞಾನ, ವಾಣಿಜ್ಯ ಪದವಿ ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಕೀಲರ ಸಂಘದ ಅಧ್ಯಕ್ಷ ಬಸವರಾಜ ಬಾಳೇಶ್ವರಮಠ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದತ್ತ ಗಮನಹರಿಸಿ ಮುಂದಿನ ಭವಿಷ್ಯವನ್ನು ಉಜ್ವಲವನ್ನಾಗಿ ಮಾಡಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಯಾಗಿ ಬದುಕು ನಡೆಸುವಂತಾಗಲಿ. ಜೀವನದಲ್ಲಿ ಯಶಸ್ಸು ಗಳಿಸಲು ನಿರಂತರ




ಉನ್ನತ ಶಿಕ್ಷಣ ಅಥವಾ ಉದ್ಯೋಗದೊಂದಿಗೆ ತಮ್ಮ ಜೀವನದಲ್ಲಿ ಯಶಸ್ಸು ಪಡೆಯಲು ತಮಗೆ ದೊರೆತ ಅವಕಾಶಗಳನ್ನು ಸಮರ್ಥವಾಗಿ ಬಳಸಿಕೊಂಡು ಉತ್ತಮ ಜೀವನಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನದಲ್ಲಿ ನೆಮ್ಮದಿಯನ್ನು ಪಡೆಯಲು ಸಾಧ್ಯವಿದೆ. ವಿದ್ಯಾರ್ಥಿಗಳು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ಆ ಮೂಲಕ ಉತ್ತಮ ಸಮಾಜವನ್ನು ನಿರ್ಮಾಣ ಮಾಡಬೇಕು ಎಂದು ಪ್ರಶಾಂತ ನೆಲವಿಗಿ ಕರೆ ನೀಡಿದರು.

ಪ್ರಯತ್ನ ಹಾಗೂ ಗುರಿ ಬಹಳ ಮುಖ್ಯ. ಪ್ರಯತ್ನಿಸಿ ಸೋಲುವುದರಿಂದ ನಮ್ಮ ತಪ್ಪಿನ ಅರಿವಾಗುತ್ತದೆ. ಸೋತಾಗ ಕುಗ್ಗದೆ ಪ್ರಯತ್ನ ಮುಂದುವರೆಸಿ ಜೀವನದಲ್ಲಿ ಸಾರ್ಥಕತೆಯನ್ನು ಕಾಣಬೇಕು. ಈ ಕಾಲೇಜಿನಲ್ಲಿ ವ್ಯಾಸಂಗ ಮಾಡಿ ಉತ್ತಮ ಫಲಿತಾಂಶ ಸಾಧಿಸಿ, ಮುಂದಿನ ದಿನಗಳಲ್ಲಿ ಸ್ನಾತಕೋತ್ತರ ಪದವಿ ಪಡೆಯುವ ಕಡೆಗೆ ಗಮನಹರಿಸಿ ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳಾದ ಭವ್ಯ, ಕಾವ್ಯ, ದರ್ಶನ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಮುಖ್ಯ ಅತಿಥಿಗಳಾಗಿ ಪ್ರಾಚಾರ್ಯ ಡಿ.ಎಸ್. ಪ್ಯಾಟಿ. ಪತ್ರಕರ್ತ ದಿಗಂಬರ ಪೂಜಾರ ಉಪನ್ಯಾಸಕರಾದ ಖುಷಾ ಅರಳಿ, ಶಶಾಂಕ, ಮೇಘಾ ವಿ., ಸುಧಾರಾಣಿ, ವಿದ್ಯಾ, ರಮೇಶ ಗಿಣಿ, ಉಪಸ್ಥಿತರಿದ್ದರು. ಉಪನ್ಯಾಸಕ ಮಂಜುನಾಥ ಬಂಡಿವಾಡ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿದ್ಯಾರ್ಥಿಗಳಾದ ಶಾರದಾ ಮಾಂಡ್ರೆ ಸ್ವಾಗತಿಸಿದರು. ಚೈತ್ರಾ ಮುಳಗುಂದ ನಿರೂಪಿಸಿದರು. ಆಶಿಯಾ ಕಮಡೊಳ್ಳಿ ವಂದಿಸಿದರು. ಪದವಿ ತರಗತಿಯ ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು.

## ಸಂಪಾದಕೀಯ

# ವಿಪಕ್ಷ ನಾಯಕರಿಗೆ ಒಪ್ಪದ ಮಾತು

ಉತ್ತಮ ಸಂಸದೀಯ ಪಟು ಎನಿಸಿಕೊಳ್ಳದಿದ್ದರೂ ಸದನದಲ್ಲಿ ಸರಿಯಾದ ದಿಕ್ಕಿನಲ್ಲಿ ಮಾತನಾಡುತ್ತಿದ್ದ ನಾಯಕರು ಲೋಕಸಭೆ ಪ್ರವೇಶಿಸಿದ್ದಾರೆ. ಸಹಜವಾಗಿ ವಿಧಾನಸಭೆಯಲ್ಲಿ ಬಿಜೆಪಿಗೆ ನಾಯಕರ ಕೊರತೆ ಕಾಣುತ್ತಿದೆ.

ಸದ್ಯ ಪ್ರತಿಪಕ್ಷದ ಸಾಲಿನಲ್ಲಿರುವ ನಾಯಕರ ಪೈಕಿ ಕೆಲವರು ಮಾತ್ರ ಆಧಾರ ಸಹಿತವಾಗಿ ಮಾತನಾಡುತ್ತಾರೆ. ಇನ್ನುಳಿದವರ ಮಾತು ಮತ್ತು ಮತಿಗೆ ಸಂಬಂಧವೇ ಇರುವುದಿಲ್ಲ. ಅಂತವರ ಸಾಲಿಗೆ ವಿಪಕ್ಷ ನಾಯಕ ಆರ್ ಅಶೋಕ್ ಸಹ ಸೇರ್ಪಡೆಯಾಗಿದ್ದಾರೆ.

ಈ ಹಿಂದೆ ಬಿಜೆಪಿ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಆಗಿದ್ದಂತಹ ಆರ್ ಅಶೋಕ್ ಇವತ್ತು ವಿಪಕ್ಷ ನಾಯಕರಾಗಿ ಸಮರ್ಥವಾಗಿ ಸರ್ಕಾರವನ್ನ ಟೀಕಿಸುತ್ತಾರೆ ಎನ್ನುವ ನಿರೀಕ್ಷೆಯಿತ್ತು. ಆದರೆ ಇತ್ತೀಚಿನ ಅವರ ಹೇಳಿಕೆಗಳನ್ನು ನೋಡಿದರೆ, ಸ್ವಪಕ್ಷದವರೇ ಅವರ ಬಗ್ಗೆ ಅಪಹಾಸ್ಯ ಮಾಡುವಂತಾಗಿದೆ.

ಅದರಲ್ಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕುರಿತಾಗಿ, ಅವರು ಮುಖ್ಯಮಂತ್ರಿ ಆಗಲು ರಾಹುಲ್ ಗಾಂಧಿಗೆ ಎಷ್ಟು ಕೋಟಿ ಕೊಟ್ಟಿದ್ದಾರೆ ಎನ್ನುವಂತಹ ಬಾಲಿಷ ಪ್ರಶ್ನೆಗಳನ್ನ ಹಾಕಿದ್ದಾರೆ. ಒಬ್ಬ ವಿಪಕ್ಷ ನಾಯಕನಾಗಿ ಇಂತಹ ಆಧಾರ ರಹಿತ ಆರೋಪಗಳನ್ನ ಮಾಡುವ ಮುನ್ನ ಒಮ್ಮೆಯೂ ಯೋಚಿಸದಿರುವುದು ಸೋಜಿಗವೇ ಸರಿ.

ರಾಜ್ಯ ಸರಕಾರ ಪ್ರತಿಯೊಂದು ಹುದ್ದೆಗೂ ಒಂದೊಂದು ದರ ನಿಗದಿ ಮಾಡಿದೆ. ಅಬಕಾರಿ ಇಲಾಖೆಯಲ್ಲಿ ಪೇದೆಯಿಂದ ಹಿಡಿದು ಆಯುಕ್ತರ ಹುದ್ದೆವರೆಗೂ ಕೊಟ್ಯಂತರ ರೂಪಾಯಿ ದರ ನಿಗದಿಪಡಿಸಿದ್ದಾರೆ ಎನ್ನುವ ಆರೋಪವನ್ನು ಮಾಡಿದ್ದಾರೆ.

ಆರ್ ಅಶೋಕ್ ಅವರಿಗೆ ವಿರೋಧ ಮಾಡುವುದಕ್ಕೆ ಅನೇಕ ವಿಷಯಗಳಿವೆ. ಆದರೆ ಈ ಆರೋಪಗಳನ್ನ ಮಾಡುವ ಮುನ್ನ ತಮ್ಮ ಬಳಿ ಸೂಕ್ತ ಸಾಕ್ಷ್ಯಾಧಾರಗಳನ್ನ ಇಟ್ಟುಕೊಳ್ಳಬೇಕಾಗಿತ್ತು. ಅದರ ರಹಿತ ಆರೋಪ ಅವರ ಗೌರವ ಘನತೆಯನ್ನು ಹೆಚ್ಚಿಸುವುದಿಲ್ಲ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

### ವಾಲ್ಮೀಕಿ ನಿಗಮದ ಅವ್ಯವಹಾರ ಪ್ರಕರಣ

# ಶಾಸಕ ಬಿ.ನಾಗೇಂದ್ರ 14 ದಿನ ನ್ಯಾಯಾಂಗ ಬಂಧನಕ್ಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆಯಿಂದ ಅಕ್ರಮವಾಗಿ ಹಣ ವರ್ಗಾವಣೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ, ಬಳ್ಳಾರಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಅವರಿಗೆ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಲಾಗಿದೆ. ಜಾರಿ ನಿರ್ದೇಶನಾಲಯದ (ಇಡಿ) ಕಸ್ಟಡಿಯಲ್ಲಿದ್ದ ನಾಗೇಂದ್ರ ಅವರನ್ನು ಬಿಗಿ ಪೊಲೀಸ್ ಭದ್ರತೆಯಲ್ಲಿ, ಶಾಸಕರು-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯಕ್ಕೆ (ಸಿಸಿಎಚ್-82) ಇಂದು(ಜು. 22) ಹಾಜರುಪಡಿಸಲಾಯಿತು.

ವಿಚಾರಣೆ ವೇಳೆ ಪ್ರಾಸಿಕ್ಯೂಷನ್ ಪರ ಹಾಜರಾದ ಇಡಿ ವಕೀಲ ಪಿ. ಪ್ರಸನ್ನ ಕುಮಾರ್ ಅವರು, ಪ್ರಕರಣದ ಮತ್ತೊಬ್ಬ ಆರೋಪಿ, ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿರುವ ಹೈದರಾಬಾದ್‌ನ ಸತ್ಯನಾರಾಯಣ ವರ್ಮಾ ಅವರನ್ನು ಬಾಡಿ ವಾರೆಂಟ್ ಮುಖಾಂತರ ವಶಕ್ಕೆ ನೀಡುವಂತೆ ಕೋರಿದರು.

ಈ ಮನವಿಯನ್ನು ಮಾನ್ಯ ಮಾಡಿದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು, ಆರೋಪಿ ಸತ್ಯನಾರಾಯಣ ವರ್ಮಾ ಅವರನ್ನು ಮಂಗಳವಾರ (ಜು. 23) ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ಸೂಚಿಸಿದರು. ಇದೇ ವೇಳೆ ನಾಗೇಂದ್ರ ಅವರನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶಿಸಿದರು.

# ಕುಮ್ಕಿ ಜಮೀನು ಮಂಜೂರಾತಿ ಸಾಧ್ಯವಿಲ್ಲ : ಸಚಿವ ಕೃಷ್ಣ ಬೈರೇಗೌಡ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾನೂನಿನ ಪ್ರಕಾರ ಕುಮ್ಕಿ ಜಮೀನನ್ನು ಮಂಜೂರು ಮಾಡಲು ಸಾಧ್ಯವಿಲ್ಲ. ಆದ್ರೆ, ಕುಮ್ಕಿ ಜಮೀನಿನಲ್ಲಿ ಬಡವರು ನಿರ್ಮಿಸಿಕೊಂಡಿರುವ ಮನೆಗಳ ತೆರವು ಕಾರ್ಯಾಚರಣೆಯೂ ಅಸಾಧ್ಯ. ಹೀಗಾಗಿ ಅಂತಹ ಪ್ರಕರಣವನ್ನು ಸರ್ಕಾರ ವಿಶೇಷ ದೃಷ್ಟಿಯಿಂದಲೇ ನೋಡಬೇಕಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ವಿಧಾನಸಭಾ ಅಧಿವೇಶನದಲ್ಲಿ ಸೋಮವಾರ ಬಿಜೆಪಿ ನಾಯಕ ವಿ. ಸುನೀಲ್ ಕುಮಾರ್ ಕುಮ್ಕಿ ಜಮೀನಿನ ಸಮಸ್ಯೆಗಳಿಗೆ ಸಂಬಂಧಿಸಿದ ಪ್ರಶ್ನೆಯೊಂದನ್ನು ಮುಂದಿಟ್ಟರು. ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಕುಮ್ಕಿ ಜಮೀನಿನ ಸಮಸ್ಯೆ ಉಲ್ಬಣಿಸಿದ್ದು, ಸ್ವಾಧೀನದಲ್ಲಿರುವ ಕುಮ್ಕಿ ಜಮೀನಿನನ್ನು ಕಲಂ ನಮೂನೆ 53-57 ಹಾಗು 93 ಸಿಸಿ ಪ್ರಕಾರ ಮಂಜೂರು ಮಾಡಬೇಕು ಎಂದು ಮನವಿ ಮಾಡಿದರು.



## ಅಮ್ಮ

ಅಮ್ಮ ನಗುಮುಖದಿ ಆಕರ್ಷಿಸಿ
ಪ್ರೀತಿ ಪ್ರೇಮದಿಂದ ಸ್ಪಂದಿಸಿ
ನವಮಾಸ ಹೊತ್ತು ಹೆತ್ತು ಸಂಪೋಷಿಸಿ
ಅಮೃತವೆಂಬ ಎದೆ ಹಾಲು ಕುಡಿಸಿ (1)

ಆಶ್ರಯದೊಂದಿಗೆ ನೀತಿ ನಿಯಮ ಪಾಲಿಸಿ
ಸರಿಯಾದ ಜ್ಞಾನ ಮಾರ್ಗದಲ್ಲಿ ಕೈ ಹಿಡಿದು ನಡೆಸಿ
ಬಂಧು ಬಾಂಧವ್ಯದೊಂದಿಗೆ ಸಕಲ ಜವಾಬ್ದಾರಿ ವಹಿಸಿ
ಸಮಾಜ ಕುಟುಂಬ ಬಂಧುತ್ವಗಳ ಸೇತುವೆ ಬೆಳಸಿ (2)

ಮಕ್ಕಳು ಮೊಮ್ಮಕ್ಕಳೊಂದಿಗೆ ಸಂದರ್ಶಿಸಿ
ಹೊತ್ತು ಹೊತ್ತಿಗೂ ಬುತ್ತಿಯನ್ನು ಉಣಿಸಿ
ಕರುಳ ಕುಡಿಯ ಕಂದಮ್ಮರನ್ನು ಪಾಲಿಸಿ ಮುದ್ದಿಸಿ
ತನ್ನ ಸಕಲ ಸೌಕರ್ಯಗಳನ್ನು ಮಕ್ಕಳಿಗಾಗಿ ಸಮರ್ಪಿಸಿ (3)

ನೋವು ನಲುವುವಿನಲ್ಲಿ ಅಮ್ಮನನ್ನು ನೆನೆಸಿ
ಹಗಲು ಇರುಳಿನಲ್ಲೂ ನಮ್ಮ ಏಳಿಗೆಗಾಗಿ ಶ್ರಮಿಸಿ
ನಿಸ್ವಾರ್ಥದಿಂದ ಸದಾ ನಮ್ಮನ್ನು ಹಾರೈಸಿ
ಅಮ್ಮನ ಅದ್ಭುತ ಶಕ್ತಿಯಿಂದ ಹೃದಯವನ್ನು ಅರಳಿಸಿ
ಅಮ್ಮ ಅಮ್ಮಾ ಎಂದರೆ ಸಕಲ ಕಾಯಿಲೆಗಳು ವಾಸಿ
ಅಮ್ಮ ಸದಾ ನಾನು ನಿನಗೆ ಚಿರಋಣಿ ಅಮ್ಮ (4)

– ಸುವರ್ಣ ಮಾಳಗಿಮನಿ (ಬಸುಮಾ)
ಜಾನಪದ ವಿವಿ ಸಂಶೋಧನಾರ್ಥಿ,
ಶಿಗ್ಗಾಂವ, ಹಾವೇರಿ.

### ತೋಂಟದ ಸಿದ್ಧೇಶ್ವರ ಮಹಾವಿದ್ಯಾಲಯದಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

# ಈ ಶತಮಾನ ಜ್ಞಾನ, ಕೌಶಲದ ಯುಗ



■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದಿನ ಕಾಲದಲ್ಲಿ ಶ್ರೀಮಂತರಿಗೆ ಸಕಲ ಗೌರವಗಳೂ ಸಲ್ಲುತ್ತಿದ್ದವು. ಆದರೆ ಈಗ ಕಾಲ ಬದಲಾಗಿದೆ. 21ನೇ ಶತಮಾನದಲ್ಲಿ ಯಾರಲ್ಲಿ ಜ್ಞಾನ ಹಾಗೂ ಕೌಶಲ್ಯ ಇರುತ್ತದೆಯೋ ಅವರಿಗೆ ಗೌರವ ಸಲ್ಲುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಅಭಿಪ್ರಾಯಪಟ್ಟರು.

ಅವರು ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ತೋಂಟದ ಸಿದ್ಧೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಪದವಿಪೂರ್ವ ಮಹಾವಿದ್ಯಾಲಯದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ, ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಲಿಂ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಆಶಯಗಳಿಗನುಗುಣವಾಗಿ ಸ್ಥಾಪನೆಯಾದ ಈ ಪ.ಪೂ ಮಹಾವಿದ್ಯಾಲಯ ಕೆಲವೇ ವರ್ಷಗಳಲ್ಲಿ ನೂರಾರು ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿ ಫಲಿತಾಂಶದಲ್ಲೂ ಗಮನಾರ್ಹ ಸಾಧನೆ ಮಾಡಿದೆ. ಇದಕ್ಕೆ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಎಸ್.ಎಸ್. ಪಟ್ಟಣಶೆಟ್ಟರ ದೂರದೃಷ್ಟಿ ಹಾಗೂ ಕಾಲೇಜು ಸಿಬ್ಬಂದಿಯವರ ಶ್ರಮ ಕಾರಣವಾಗಿದೆ. ಪಿಯುಸಿ ಪರೀಕ್ಷೆಯಲ್ಲಿ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದರಿಂದ ಇತರೆ ವಿದ್ಯಾರ್ಥಿಗಳಲ್ಲೂ ಸಾಧನೆ ಮಾಡುವ ಸ್ಫೂರ್ತಿ ದೊರೆಯುತ್ತದೆ. ವಿದ್ಯಾರ್ಥಿಯ ಸರ್ವತೋಮುಖ ಬೆಳವಣಿಗೆಯೇ ಶಿಕ್ಷಣವಾಗಿದ್ದು, ವಿದ್ಯಾರ್ಥಿಗಳು ಕೇವಲ ಪಠ್ಯದ ಕಡೆ ಗಮನ ನೀಡದೇ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, 15ನೇ ಶತಮಾನದಲ್ಲಿ ಬಸವತತ್ವವನ್ನು ಪುನರುತ್ಥಾಪಿಸಿದ ತೋಂಟದ ಸಿದ್ಧೇಶ್ವರ ಯತಿಗಳ ಹೆಸರಿನಲ್ಲಿ ಆರಂಭವಾದ ಈ ಮಹಾವಿದ್ಯಾಲಯ ಕೆಲವೇ ವರ್ಷಗಳಲ್ಲಿ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಈ ಮೂರು ವಿಭಾಗಗಳಲ್ಲೂ ಉತ್ತಮ ಫಲಿತಾಂಶ ನೀಡುತ್ತಿದೆ. ಶಿಕ್ಷಣವು ಸ್ವಾವಲಂಬಿ ಬದುಕಿಗೆ ಆಧಾರವಾಗಿದ್ದು, ವಿದ್ಯಾರ್ಥಿಗಳು ಶಿಕ್ಷಣದ ಮಹತ್ವವನ್ನು ಅರಿಯುವ ಜೊತೆಗೆ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ಕನ್ನಡದ ಕುಲಗುರುಗಳೆಂದೇ ಖ್ಯಾತರಾಗಿದ್ದ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಆಶಯಗಳಿಗೆ ಅನುಗುಣವಾಗಿ ಈ ಮಹಾವಿದ್ಯಾಲಯ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕರ ಶ್ರಮ ಅಭಿನಂದನೀಯ ಎಂದರು.

ಅತಿಥಿಗಳಾಗಿ ಭಾಗವಹಿಸಿದ್ದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಗ್ರಂಥಪಾಲಕರಾದ ಡಾ.ಮಂಜುನಾಥ ಉತ್ತರಕರ ಮಾತನಾಡಿ, ನನ್ನ ವಿದ್ಯಾಗುರುಗಳಾದ ಎಸ್.ವಿ. ಸಂಕನೂರರು ಹಾಗೂ ನನ್ನ ಜೀವನ ರೂಪಿಸಿದ ಎಸ್.ಎಸ್. ಪಟ್ಟಣಶೆಟ್ಟರ ಗುರುಗಳ ಜೊತೆ ವೇದಿಕೆ ಹಂಚಿಕೊಂಡಿದ್ದು ಅವಿಸ್ಮರಣೀಯ ಕ್ಷಣವಾಗಿದೆ. ವಿದ್ಯಾರ್ಥಿಗಳು ತಾವು ಅಂದುಕೊಂಡ ಗುರಿ ಸಾಧನೆ ಅಸಾಧ್ಯ ಎಂದುಕೊಳ್ಳದೇ, ಎದುರಾಗುವ ಸೋಲುಗಳಿಗೆ ಎದೆಗುಂದದೇ ಮುನ್ನುಗ್ಗಬೇಕು ಎಂದರು.

ಸರ್ಕಾರಿ ಐಟಿಐ ಕಾಲೇಜು ಪ್ರಾಚಾರ್ಯರಾದ ಡಾ.ಬಸವರಾಜ ಮಾಲೂರ ಅತಿಥಿಗಳಾಗಿ ಭಾಗವಹಿಸಿದ್ದರು. ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಪ್ರಾಚಾರ್ಯ ವಾಯ್.ಎಸ್. ಮತ್ತೂರ ಸರ್ವರನ್ನೂ ಸ್ವಾಗತಿಸಿದರು.

ನಯನಾ ಅಳವಂಡಿ ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳ ಕುರಿತಾದ ಗೀತೆ ಹಾಡಿದಳು. ಇಚ್ಛಾ ಹಾಗೂ ಸಂಗಡಿಗರಿಂದ ವಚನ ನೃತ್ಯ ಜರುಗಿತು. ಸುಷ್ಮಿತಾ ಯಣಗಾಯಿ ಹಾಗೂ ಸಂಗಡಿಗರು ವಚನ ಪ್ರಾರ್ಥನೆ ನೆರವೇರಿಸಿದರು. ವೇದಿಕೆ ಮೇಲೆ ಕಾಲೇಜು ಸಂಸತ್ ಪ್ರಧಾನ ಕಾರ್ಯದರ್ಶಿ ಸಂತೋಷ ಕೋಟೆಣ್ಣವರ, ಉಪ ಪ್ರಧಾನ ಕಾರ್ಯದರ್ಶಿ ನಗೀನಾ ನದಾಫ್ ಇದ್ದರು. ರೇಷ್ಮಾ ಎಚ್ ನಿರೂಪಿಸಿದರೆ, ಎಸ್.ಎಸ್. ಭಜಂತ್ರಿ ವಂದಿಸಿದರು.

### ತೋಂ. ಸಿದ್ಧಲಿಂಗ ಮಹಾಸ್ವಾಮಿಗಳ ಪ್ರತಿಭಾ ಪುರಸ್ಕಾರ

ಕಳೆದ ವರ್ಷದ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಮಹಾವಿದ್ಯಾಲಯದ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿಯರಾದ ಸೌಮ್ಯ ಕುರಡಗಿ, ರಾಧಿಕಾ ಭಜಂತ್ರಿ, ಮಧು ನಾಗರಾಳ ಮತ್ತು ವಿಜ್ಞಾನ ವಿಭಾಗದ ಚೇತನ ಬದಾಮಿ, ಸಾನಿಯಾ ಹುಡೇದ, ಪಲ್ಲವಿ ಆನಿ ಹಾಗೂ ಕಲಾ ವಿಭಾಗದ ಅಕ್ಷತಾ ಉಮಚಗಿ, ಭೀಮರಾಜ ಭಜಂತ್ರಿ, ಅಶ್ವಿನಿ ಗೌಡರ ಇವರಿಗೆ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಪ್ರತಿಭಾ ಪುರಸ್ಕಾರ ನೀಡಿ ಸಂಮಾನಿಸಲಾಯಿತು.

# ಖಾಸಗಿ ವಲಯದ ಮುಖ್ಯಸ್ಥರ ವಿರುದ್ಧ ಆಕ್ರೋಶ



■ವಿಜಯಸಾಕ್ಷಿ ಸುದ್ದಿ, ಗದಗ

ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಮಿಸಲಾತಿಯನ್ನು ವಿರೋಧಿಸುತ್ತಿರುವ ಖಾಸಗಿ ವಲಯದ ಮುಖ್ಯಸ್ಥರ ನಡೆಯನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ಅಧ್ಯಕ್ಷ ದಾವಲಸಾಬ ಮುಳಗುಂದ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ದಾವಲಸಾಬ ಮುಳಗುಂದ ಮಾತನಾಡಿ, ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಖಾಸಗಿ ವಲಯದಲ್ಲಿ 100ಕ್ಕೆ 100ರಷ್ಟು ಸಿ ಮತ್ತು ಡಿ ಗ್ರೂಪ್ ಹುದ್ದೆಗೆ ಆದ್ಯತೆ ನೀಡುವ ವರದಿ ಅನುಷ್ಠಾನ ಮಾಡುತ್ತಿರುವದು ನಮ್ಮೆಲ್ಲ ಕನ್ನಡಿಗೆ ಸಿಕ್ಕ ಜಯ. ಖಾಸಗಿ ವಲಯದ ಮುಖ್ಯಸ್ಥರು ಕನ್ನಡದ ನೆಲದಲ್ಲಿ ಇದ್ದು, ಕನ್ನಡದ ನೆಲ, ಜಲ, ಪರಂಪರೆ, ಸಂಪತ್ತು ಸೌಲಭ್ಯಗಳನ್ನು ಪಡೆದುಕೊಂಡು, ಇಲ್ಲಿಯ ಕನ್ನಡಿಗರಿಗೆ ಮಾಡುತ್ತಿರುವ ಅನ್ಯಾಯವಾಗಿದೆ. ಸರ್ಕಾರ ಯಾವುದೇ ಒತ್ತಡಕ್ಕೆ ಮಣಿಯದೇ ಸರೋಜಿನಿ ಮಹಿಷಿ ವರದಿಯನ್ನು ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವೆಂಕಟೇಶ ಬೇಲೂರ, ಶ್ರೀನಿವಾಸ ಭಂಡಾರಿ, ಸಹದೇವ ಕೋಟಿ, ಮಹೇಶ್ ಕಲಘಟಗಿ, ಸಿದ್ದಪ್ಪ ಮುದ್ದಾಪೂರ, ತಿಮ್ಮಣ್ಣ ಡೋಣಿ, ರಫೀಕ ಕೇರಿಮನಿ, ಮಣಿಕಂಠ ಭಂಡಾರಿ, ಮಂಜುನಾಥ ಗಾಂಜಿ, ವಾಸು ಗೋಸಾವಿ, ಶ್ರೇಯಾಂಕ ಹಿರೇಮಠ, ಭರಮಣ್ಣ ಗೌಳಿ, ರವಿ ಗುರಿಕಾರ, ಅಮರೇಶ ಗಾಂಜಿ, ಗವಿಸಿದ್ದಪ್ಪ ಆಲೂರ, ಮಾರುತಿ ಉಪ್ಪಾರ, ಗೌಸ, ಮನ್ಸೂರ ಮಕಾನದಾರ, ಹೊಳಿಯಪ್ಪ ಜಂಪಣ್ಣವರ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ತಂದೆ-ತಾಯಿ, ಗುರು ಹಿರಿಯರನ್ನು ಗೌರವಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮನ್ನು ಹಡೆದ ತಂದೆ-ತಾಯಿ ಮತ್ತು ಗುರು-ಹಿರಿಯರನ್ನು ಗೌರವಿಸುವುದನ್ನು ನೀವು ಕಲಿತಾಗ ಮಾತ್ರ ಸಮಾಜದಲ್ಲಿ ಉನ್ನತ ವ್ಯಕ್ತಿಗಳಾಗಲು ಸಾಧ್ಯ. ನೀವು ಕಲಿತ ಶಾಲೆಯನ್ನು, ಕಲಿಸಿದ ಗುರುಗಳನ್ನು ಮತ್ತು ನಿಮ್ಮ ತಂದೆ-ತಾಯಿಗಳನ್ನು ನೀವು ಮರೆತಿದ್ದೇ ಆದರೆ ಜೀವನದಲ್ಲಿ ಬಹಳಷ್ಟು ಕಷ್ಟಗಳನ್ನು ಅನುಭವಿಸುತ್ತೀರಿ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ. ಕುಲಕರ್ಣಿ ಹೇಳಿದರು.

ಸಮೀಪದ ಅಬ್ಬಿಗೆರೆಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ 2024-25ನೇ ಸಾಲಿನ ಶಾಲಾ ಸಂಸತ್ತು ಮತ್ತು ವಿವಿಧ ಸಾಂಘಿಕ ಚಟುವಟಿಕೆಗಳ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮ ಭವಿಷ್ಯವನ್ನು ಕಟ್ಟಿಕೊಳ್ಳುವವರು ನೀವೇ. ನಿಮ್ಮ ಭವಿಷ್ಯದ ಬಗ್ಗೆ ಅನೇಕ ಕನಸುಗಳನ್ನು ಕಟ್ಟಿಕೊಂಡು ನಿಮ್ಮ ತಂದೆ-ತಾಯಿಗಳು ಎಲ್ಲ ಕಷ್ಟಗಳನ್ನು ಸಹಿಸಿ ನಿಮಗೆ ಬೇಕಾದ ಎಲ್ಲ ಅನುಕೂಲತೆಗಳನ್ನು ಮಾಡಿಕೊಡುತ್ತಾರೆ. ಅವರ ಕನಸುಗಳಿಗೆ ಧಕ್ಕೆ ಬಾರದಂತೆ ನೀವು ನಿಮ್ಮ ವಿದ್ಯಾರ್ಥಿ ಜೀವನವನ್ನು ಕಳೆಯಬೇಕು ಎಂದು ಹೇಳಿದರು.


ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕಿ ಎಚ್.ಎಂ. ರತ್ನಮ್ಮ, ಜೀವನದಲ್ಲಿ ಈ ಘಟ್ಟ ಒಮ್ಮೆ ಮಾತ್ರ ಬರುತ್ತದೆ. ಇದನ್ನು ನೀವು ಸರಿಯಾಗಿ ಉಪಯೋಗಿಸಿಕೊಂಡು ಚೆನ್ನಾಗಿ ಅಭ್ಯಾಸ ಮಾಡಿದರೆ ಭವಿಷ್ಯದಲ್ಲಿ ಉನ್ನತ ಸ್ಥಾನಗಳನ್ನು ತಲುಪಬಹುದು. ನಿಮ್ಮೆಲ್ಲರ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ಶಾಲೆಯ 8 ಜನ ಮಕ್ಕಳು ಎನ್‌ಎಮ್‌ಎಮ್‌ಎಸ್ ಪರೀಕ್ಷೆಯಲ್ಲಿ ಪಾಸಾಗುವಂತೆ ತರಬೇತಿ ನೀಡಿದ ರಾಕೇಶ ನಡವಲಗುಡ್ಡ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಿ, ಪಾಸಾದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಜಿ.ಪಂ. ಮಾಜಿ ಸದಸ್ಯ ಸೋಮಣ್ಣ ಹರ್ಲಾಪೂರ ಮಾತನಾಡಿದರು.

ವೇದಿಕೆಯ ಮೇಲೆ ನಿವೃತ್ತ ಉಪನ್ಯಾಸಕ ಎಂ.ಪಿ. ತಳಬಾಳ, ದಾನಿ ಮಲ್ಲಿಕಾರ್ಜುನಪ್ಪ ಮೆಣಸಿಗಿ, ಶಿಕ್ಷಕ ಎಂ.ವಿ. ಬಿಂಗಿ, ಶಾಲಾ ಸಿಬ್ಬಂದಿಯವರು, ಮತ್ತಿತರರಿದ್ದರು. ಮುಖ್ಯ ಶಿಕ್ಷಕ ಎಂ.ವಿ. ವೀರಾಪೂರ ಸ್ವಾಗತಿಸಿದರು. ಶಿಕ್ಷಕಿ ಸಾರಂಗಮಠ ಪ್ರಮಾಣ ವಚನ ಬೋಧಿಸಿದರು.

# ಜಮೀನು ವಿವಾದ: ಇಬ್ಬರು ಮಹಿಳೆಯರ ಜೀವಂತ ಸಮಾಧಿಗೆ ಯತ್ನ!



■ವಿಜಯಸಾಕ್ಷಿ ಸುದ್ದಿ, ಮಧ್ಯ ಪ್ರದೇಶ

ತಮ್ಮ ಜಮೀನಿನಲ್ಲಿ ರಸ್ತೆ ನಿರ್ಮಾಣ ಮಾಡುತ್ತಿದ್ದವರ ವಿರುದ್ಧ ಪ್ರತಿಭಟಿಸಿದ ಇಬ್ಬರು ಮಹಿಳೆಯರ ಮೇಲೆ ಟಿಪ್ಪರ್ ಮೂಲಕ ಮಣ್ಣು ಸುರಿದು ಜೀವಂತ ಸಮಾಧಿಗೆ ಯತ್ನಿಸಿದ ಘಟನೆ ಮಧ್ಯ ಪ್ರದೇಶದ ರೇವಾ ಜಿಲ್ಲೆಯಲ್ಲಿ ನಡೆದಿದೆ.

ರೇವಾ ಜಿಲ್ಲೆಯ ಹಿನೌಟಾದಲ್ಲಿ ಎರಡು ಕುಟುಂಬಗಳ ನಡುವೆ ಜಮೀನು ಜಗಳ ನಡೆಯುತ್ತಿತ್ತು. ಒಂದು ಕಡೆಯ ಗುಂಪು ಜಮೀನಿನ ಮೂಲಕ ರಸ್ತೆ ನಿರ್ಮಾಣ ಕಾಮಗಾರಿ ಮಾಡುತ್ತಿದ್ದರು. ಅದನ್ನು ಇನ್ನೊಂದು ಕಡೆಯ ಗುಂಪು ವಿರೋಧಿಸುತ್ತಿತ್ತು ಎಂದು ತಿಳಿದು ಬಂದಿದೆ.

ಆದರೂ, ಕಾಮಗಾರಿ ಮುಂದುವರೆಯುತ್ತಿತ್ತು. ಇದನ್ನು ವಿರೋಧಿಸಿ ಇನ್ನೊಂದು ಗುಂಪಿನ ಮಹಿಳೆಯರು ಜಮೀನಿನಲ್ಲಿ ಕುಳಿತು ಪ್ರತಿಭಟನೆ ಮಾಡುತ್ತಿದ್ದರು. ಆಗ ಕಾಮಗಾರಿ ನಡೆಸುತ್ತಿದ್ದ ಗುಂಪಿನ ಆದೇಶದಂತೆ ಟಿಪ್ಪರ್ ಚಾಲಕ, ಕಲ್ಲು ಮಣ್ಣನ್ನು ಪ್ರತಿಭಟನೆ ಮಾಡುತ್ತಿದ್ದ ಮಹಿಳೆಯರ ಮೇಲೆ ಸುರಿದು, ಜೀವಂತ ಸಮಾಧಿಗೆ ಪ್ರಯತ್ನಿಸಿದ್ದಾನೆ ಎಂದು ಆರೋಪಿಸಲಾಗಿದೆ.

ಮಮತಾ ಪಾಂಡೆ ಹಾಗೂ ಆಶಾ ಪಾಂಡೆ ಎಂಬ ಇಬ್ಬರು ಮಹಿಳೆಯರು ತಮ್ಮ ಜಮೀನಿನಲ್ಲಿ ರಸ್ತೆ ನಿರ್ಮಾಣ ಮಾಡುವುದನ್ನು ವಿರೋಧಿಸಿದ್ದು, ಅವರು ಜೀವಂತ ಸಮಾಧಿ ಮಾಡಲು ಯತ್ನಿಸಲಾಗಿದೆ. ಒಬ್ಬರು ಮಹಿಳೆಯ ಸೊಂಟದವರೆಗೆ ಹಾಗೂ ಇನ್ನೊಬ್ಬರ ಕುತ್ತಿಗೆವರೆಗೆ ಮಣ್ಣು ಹಾಕಲಾಗಿತ್ತು. ಇದರಿಂದ ಒಬ್ಬರು ಪ್ರಜ್ಞೆ ತಪ್ಪಿದ್ದರು ಎಂದು ವರದಿಯಾಗಿದೆ.

ಟಿಪ್ಪರ್ ಚಾಲಕ ವಿಪಿನ್ ಪಾಂಡೆ ಎಂಬಾತನನ್ನು ಬಂಧಿಸಲಾಗಿದ್ದು, ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಇನ್ನಿಬ್ಬರನ್ನು ಪೊಲೀಸರು ಹುಡುಕುತ್ತಿದ್ದು, ಎಲ್ಲಾ ಆರೋಪಿಗಳು ಸಂತ್ರಸ್ತರ ಸಂಬಂಧಿಕರು ಎಂದು ಹೇಳಿದ್ದಾರೆ.

# ಕನ್ವರ್ ಯಾತ್ರೆ । ಹೋಟೆಲ್, ಅಂಗಡಿ ಮಾಲೀಕರ ಹೆಸರು ಪ್ರದರ್ಶನ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕನ್ವರ್ ಯಾತ್ರೆ ಸಾಗುವ ಮಾರ್ಗದಲ್ಲಿರುವ ಅಂಗಡಿ, ಹೋಟೆಲ್‌ಗಳು ತಮ್ಮ ಮಾಲೀಕರು, ಸಿಬ್ಬಂದಿಯ ಹೆಸರು ಪ್ರದರ್ಶಿಸಬೇಕು ಎಂಬ ಉತ್ತರ ಪ್ರದೇಶ ಮತ್ತು ಉತ್ತರಾಖಂಡ ಸರ್ಕಾರಗಳ ಆದೇಶವನ್ನು ಸುಪ್ರೀಂ ಕೋರ್ಟ್ ಸೋಮವಾರ ತಡೆ ಹಿಡಿದಿದೆ.

ನ್ಯಾಯಮೂರ್ತಿಗಳಾದ ಹೃಷಿಕೇಶ್ ರಾಯ್ ಮತ್ತು ಎಸ್‌ವಿಎನ್ ಭಟ್ಟಿ ಅವರ ಪೀಠವು ಸರ್ಕಾರದ ನಿರ್ದೇಶನಗಳನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳಿಗೆ ಸಂಬಂಧಿಸಿದಂತೆ ನೋಟಿಸ್ ಜಾರಿ ಮಾಡುವಾಗ ಮಧ್ಯಂತರ ಆದೇಶ ನೀಡಿದೆ. ಆದಾಗ್ಯೂ, ಅಂಗಡಿ, ಹೋಟೆಲ್‌ಗಳು ಆಹಾರದ ಪ್ರಕಾರವನ್ನು ಪ್ರದರ್ಶಿಸಬೇಕು ಎಂದು ಪೀಠ ಸ್ಪಷ್ಟಪಡಿಸಿದೆ.

ಕನ್ವರ್ ಯಾತ್ರೆಯ ಮಾರ್ಗದಲ್ಲಿ ಬರುವ ಆಹಾರ ಮತ್ತು ಪಾನೀಯ ಅಂಗಡಿಗಳು ತಮ್ಮ ಸಂಸ್ಥೆಗಳ ನಿರ್ವಾಹಕರು/ಮಾಲೀಕರ ಹೆಸರು ಮತ್ತು ಗುರುತನ್ನು ಪ್ರದರ್ಶಿಸುವುದನ್ನು ಉತ್ತರ ಪ್ರದೇಶ ಮತ್ತು ಉತ್ತರಾಖಂಡ ಸರ್ಕಾರಗಳು ಕಡ್ಡಾಯಗೊಳಿಸಿತ್ತು. ಕಾನೂನು ಮತ್ತು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಮರ್ಥಿಸಿಕೊಂಡಿತ್ತು.

**ಶ್ರೀ ರಂಭಾಪುರಿ ಪೀಠದಲ್ಲಿ ಗುರು ಪೌರ್ಣಿಮೆ ಅಂಗವಾಗಿ ಧರ್ಮ ಜಾಗೃತಿ ಸಮಾರಂಭ**

# ಗುರು ಕರುಣೆಯಿಂದ ಆತ್ಮ ಸಾಕ್ಷಾತ್ಕಾರ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಸಕಲ ಜೀವ ರಾಶಿಗಳಿಗೆ ಒಳಿತನ್ನೇ ಬಯಸುವ ಶ್ರೀ ಗುರು ಕರುಣಾಸಾಗರ. ಶ್ರೀ ಗುರು ಅನಂತ ಅರಿವಿನ ಚೈತನ್ಯ ಮೂರ್ತಿ. ಗುರು ಕರುಣೆಯಿಂದ ಸೌಭಾಗ್ಯ ಸಂಪತ್ತು ಪ್ರಾಪ್ತಿ. ಗುರು ಕರುಣೆಯಿಂದ ಶಿಷ್ಯನಿಗೆ ಆತ್ಮ ಸಾಕ್ಷಾತ್ಕಾರ ದೊರಕುವುದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ರಂಭಾಪುರಿ ಪೀಠದಲ್ಲಿ ಗುರು ಪೌರ್ಣಿಮೆ ಅಂಗವಾಗಿ ಆಯೋಜಿಸಿದ್ದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶ್ರೀ ಗುರು ಆಧ್ಯಾತ್ಮ ಲೋಕದ ಚಕ್ರವರ್ತಿ. ಕಾಲದಿಂದ ಅವಿಚ್ಛೇದನವಾಗದ ತತ್ವ ಜ್ಞಾನವುಳ್ಳವನೇ ಪರಮ ಗುರು. ಶ್ರೀ ಗುರುವಿನ ಸ್ಥಾನಮಾನ ಎಂದೆಂದಿಗೂ ಮರೆಯಲಾಗದು. ಸತ್ಯಾನುಭೂತಿಗಾಗಿ ಸಮಸ್ತ ಜಗದಲ್ಲಿ ಸಂಚರಿಸಿ ಬಂದವ ನಿಜವಾದ ಗುರು. ಭೌತಿಕ ಸಂಬಂಧಗಳು ನಾಶಗೊಂಡರೂ ಸಹ ಗುರು ಶಿಷ್ಯರ ಸಂಬಂಧ ಯಾವಾಗಲೂ ಶಾಶ್ವತ. ಗುರುವಿಲ್ಲದ-ಗುರಿಯಿಲ್ಲದ ಮಾನವ ಜೀವನ ಶ್ರೇಯಸ್ಸು ಕಾಣಲು ಸಾಧ್ಯವಾಗದು ಎಂದರು.



ಈ ಪವಿತ್ರ ಸಮಾರಂಭದಲ್ಲಿ ಮೊದಲಿಗೆ ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಗುರು ಪೂರ್ಣಿಮೆ ನಿಮಿತ್ತ ಭಕ್ತಾಭಿಮಾನಿಗಳು ಪಾದಪೂಜೆ ನಡೆಸಿ ಗೌರವ ಸಲ್ಲಿಸಿ ಆಶೀರ್ವಾದ ಪಡೆದರು.

ಮಳಲಿ ಮಠದ ಡಾ. ನಾಗಭೂಷಣ ಶ್ರೀಗಳು, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಕಾರ್ಜುವಳ್ಳಿ ಸದಾಶಿವ ಶ್ರೀಗಳು, ಮಳಖೇಡ ಅಭಿನವ ಕಾರ್ತಿಕೇಶ್ವರ ಶ್ರೀಗಳು, ಗುಂಡೆಪಲ್ಲಿ ಶಿವಸಿದ್ಧ ಸೋಮೇಶ್ವರ ಶ್ರೀಗಳು, ಬೇರುಗಂಡಿ ರೇಣುಕ ಮಹಾಂತ ಶ್ರೀಗಳು, ರಟ್ಟಿಹಳ್ಳಿ ವಿಶ್ವೇಶ್ವರ ದೇವರು, ರೇವತಗಾಂವ ವಿಶ್ವನಾಥ ದೇವರು ಪವಿತ್ರ ಸಮಾರಂಭದಲ್ಲಿ ಪಾಲ್ಗೊಂಡು ಗುರು ಹಿರಿಮೆಯನ್ನು ಕೊಂಡಾಡಿದರು.

ಬೆಂಗಳೂರಿನ ಉದಯ ಮತ್ತು ಸಂಗಡಿಗರು, ಬ್ಯಾಡಗಿ ರವೀಂದ್ರ ದಂಪತಿಗಳು, ಸೊಲ್ಲಾಪುರ ರಾಜು ಚಡಚಣಕರ, ನಾಂದೇಡ ವಿನಾಯಕ, ಚಿಕ್ಕಮಗಳೂರಿನ ಉಪ್ಪಳ್ಳಿ ಬಸವರಾಜ ಮತ್ತು ದೇವರಾಜು ಸೇರಿದಂತೆ ಹಲವಾರು ಗಣ್ಯರಿಗೆ, ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಶುಭ ಹಾರೈಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಉಟಗಿ ಹಿರೇಮಠದ ಶಿವಪ್ರಸಾದ ದೇವರು ನಿರೂಪಿಸಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು. ಪ್ರಾತಃಕಾಲದಲ್ಲಿ ಗುರು ಪೌರ್ಣಿಮೆಯ ನಿಮಿತ್ತ ಕ್ಷೇತ್ರದ ಎಲ್ಲ ದೈವಗಳಿಗೆ ವಿಶೇಷ ಪೂಜೆ ಜರುಗಿತು.

ಪರಶಿವನ ಸಾಕಾರ ಇನ್ನೊಂದು ರೂಪವೇ ಶ್ರೀ ಗುರು. ಅಂತರಂಗ-ಬಹಿರಂಗ ಶುದ್ಧಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆಯೇ ಹೊರತು ಬೇರಾರಿಗಿಲ್ಲ. ವೀರಶೈವ ಧರ್ಮ ಮೊದಲ್ಗೊಂಡು ಎಲ್ಲಾ ಧರ್ಮಗಳಲ್ಲಿ ಶ್ರೀ ಗುರುವಿಗೆ ಪ್ರಥಮ ಸ್ಥಾನ ಕಲ್ಪಿಸಿಕೊಟ್ಟಿದೆ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು. ಅಂತರಂಗದ ಕತ್ತಲೆ ಕಳೆಯಲು ಗುರು ಬೇಕೇ ಬೇಕು ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.



ಮುಳಗುಂದ ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನ ಆವರಣದಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಮಂಜೂರಾದ ಒಂದು ಕೋಟಿ ರೂ ವೆಚ್ಚದ ಸಮುದಾಯ ಭವನಕ್ಕೆ ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ ಭೂಮಿ ಪೂಜೆ ನೆರವೇರಿಸಿದರು. ಪ.ಪಂ ಸದಸ್ಯರಾದ ಎಸ್.ಸಿ. ಬಡ್ನಿ, ವಿಜಯ ನೀಲಗುಂದ, ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ, ಪ್ರಸನ್ನ, ಅನುಪಮಾ, ಎಂ.ಸಿ. ಶಿಂದೂರಿ, ವಿಠ್ಠಲ ಪವಾರ, ಕೆ.ಎಂ. ಶಿರೂರ, ಹುಡ್ಕೋ ಅಭಿಯಂತರರಾದ ಶ್ರೀನಿವಾಸ ಪಾಟೀಲ್ ಇದ್ದರು.

# ಚಿಗರೆ ಮರಿಯ ರಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೋಟುಮಚಗಿ ಗ್ರಾಮದ ಶಕುಂತಲಾ ನಂದಿಕೋಲಮಠ ಎಂಬುವರ ಜಮೀನಿನಲ್ಲಿ ಪತ್ತೆಯಾಗಿದ್ದ ಚಿಗರೆ ಮರಿಯನ್ನು ರೈತ ಕಾರ್ಮಿಕ ಬಸಯ್ಯ ನಂದಿಕೋಲಮಠ ರಕ್ಷಿಸಿ ಗದಗ ಅರಣ್ಯ ಇಲಾಖೆಗೆ ಹಸ್ತಾಂತರರಿಸಿದ್ದಾರೆ.

ಅಧಿಕಾರಿ ಮಂಜುನಾಥ ಮೇಗಲಮನಿ ಈ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದಿಸಿ, ಇಲಾಖೆಯೊಂದಿಗೆ ರೈತರು, ಸಾರ್ವಜನಿಕರ ಸಹಕಾರ ಅತ್ಯಗತ್ಯ. ವನ್ಯಜೀವಿಗಳು ಪತ್ತೆಯಾದಲ್ಲಿ ನೇರವಾಗಿ ಅರಣ್ಯ ಇಲಾಖೆಯನ್ನು ಸಂಪರ್ಕಿಸಿ ಹಸ್ತಾಂತರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು. ಈ ಸಂದರ್ಭದಲ್ಲಿ ಕೋಟುಮಚಗಿ ಯುವಮುಖಂಡ ರಾಜು ಗಾಣಿಗೇರ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಕೊಪ್ಪಳ ಕಾಲೇಜಿನ ವಿದ್ಯಾರ್ಥಿಗಳಿಗೆ ಬಹುಮಾನ**

# ತುಮಕೂರಿನಲ್ಲಿ ನಡೆದ ಮಾಧ್ಯಮ ಹಬ್ಬದಲ್ಲಿ ಸಾಧನೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಈಚೆಗೆ ತುಮಕೂರಿನಲ್ಲಿ ನಡೆದ ರಾಜ್ಯಮಟ್ಟದ ಮಾಧ್ಯಮ ಹಬ್ಬದ ವಿವಿಧ ಸ್ಪರ್ಧೆಗಳಲ್ಲಿ ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಮೂರು ಬಹುಮಾನಗಳನ್ನು ಗಳಿಸುವ ಮೂಲಕ ಸಾಧನೆ ಮಾಡಿದ್ದಾರೆ.

ಮಾಧ್ಯಮ ಹಬ್ಬದಲ್ಲಿ ನಡೆದ ಪಿಟಿಸಿ ಸ್ಪರ್ಧೆಯಲ್ಲಿ ಕಾಲೇಜಿನ ಬಿಎ ನಾಲ್ಕನೇ ಸೆಮಿಸ್ಟರ್‌ನ ಸಚಿನ್ ಭಜಂತ್ರಿ ಪ್ರಥಮ ಸ್ಥಾನ, ಸುದ್ದಿ ಬರವಣಿಗೆ ಸ್ಪರ್ಧೆಯಲ್ಲಿ ಬಿಬಿಎ ಎರಡನೇ ಸೆಮಿಸ್ಟರ್‌ನ ಪ್ರಕಾಶ ಲ್ಯಾವಕ್ಕಿ ದ್ವಿತೀಯ ಸ್ಥಾನ ಹಾಗೂ ಛಾಯಾಚಿತ್ರ ಸ್ಪರ್ಧೆಯಲ್ಲಿ ಬಿಎಸ್‌ಸಿ ಆರನೇ ಸೆಮಿಸ್ಟರ್‌ನ ಆನಂದ ಚಹ್ವಾಣ ತೃತೀಯ ಸ್ಥಾನ ಪಡೆದು ನಗದು ಬಹುಮಾನ, ಪಾರಿತೋಷಕ ಹಾಗೂ ಪ್ರಮಾಣಪತ್ರಗಳನ್ನು ಗಳಿಸಿದ್ದಾರೆ. ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಬಸವರಾಜ ಕರುಗಲ್ ಮಾರ್ಗದರ್ಶನ ನೀಡಿದ್ದರು.

ವಿದ್ಯಾರ್ಥಿಗಳ ಸಾಧನೆಯನ್ನು ಕಾಲೇಜಿನ ಪ್ರಾಂಶುಪಾಲ ಪ್ರೊ. ತಿಮ್ಮಾರಡ್ಡಿ ಮೇಟಿ ಶ್ಲಾಘಿಸಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ನಿರ್ವಹಣಾಶಾಸ್ತ್ರದ ಮುಖ್ಯಸ್ಥ ಶಿವನಾಥ.ಇ.ಜಿ, ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ಡಿ.ಎಚ್.ನಾಯಕ, ದೈಹಿಕ ನಿರ್ದೇಶಕ ಮಂಜುನಾಥ ಆರೆಂಟ್ನೂರು, ಅರ್ಥಶಾಸ್ತ್ರ ವಿಭಾಗದ ಹಿರಿಯ ಅತಿಥಿ ಉಪನ್ಯಾಸಕ ಡಾ.ಸಣ್ಣದೇವೇಂದ್ರಸ್ವಾಮಿ ಮತ್ತಿತರರು ಇದ್ದರು.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ


■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರ ( ಪಿಯುಸಿ ಮತ್ತು ಪಿಯುಸಿ ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2024-25 ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ https://shp.karnataka.gov.in ಅರ್ಜಿ ಸಲ್ಲಿಸಲು ಜುಲೈ 23 ರವರಗೆ ದಿನಾಂಕವನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ನಿಧನ ವಾರ್ತೆ

## ಡಾ.ರಾಘವೇಂದ್ರರಾವ ಮೇಲಗಿರಿ



ಗದಗ: ಮೂಲತ ಗದುಗಿನವರಾದ ಬ್ರಾಹ್ಮಣ ಸಮಾಜದ ಮುಖಂಡ ಮುಂಬೈನ ಹಿರಿಯ ಇಎನ್‌ಟಿ ಸರ್ಜನ್ ಡಾ.ರಾಘವೇಂದ್ರರಾವ ಧೀರೇಂದ್ರರಾವ ಮೇಲಗಿರಿ (91) ಇತ್ತೀಚೆಗೆ ಮುಂಬೈನಲ್ಲಿ ನಿಧನರಾದರು. ದಿವಂಗತರು ಸಹೋದರರು, ಸಹೋದರಿ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಸಂತಾಪ: ಡಾ.ರಾಘವೇಂದ್ರರಾವ ಧೀರೇಂದ್ರರಾವ ಮೇಲಗಿರಿ ನಿಧನಕ್ಕೆ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಧುರೀಣ ಪಂ. ರಾಜಗೋಪಾಲಾಚಾರ್ಯ ಮಳಗಿ ಸಂತಾಪ ಸೂಚಿಸಿದ್ದಾರೆ.

## ಕೇಳವ್ವ ರೂಪಸಿಂಗ ಪೂಜಾರ



ಗದಗ, ತಾಲೂಕಿನ ಬೆಳಧಡಿ ಶ್ರೀಮತಿ ಕೇಳವ್ವ ರೂಪಸಿಂಗ ಪೂಜಾರ (95) ವಯೋಸಹಜ ಅನಾರಗ್ಯದಿಂದ ಸೋಮವಾರ ಮದ್ಯಾಹ್ನ ನಿಧನರಾದರು. ಅವರಿಗೆ ಇಬ್ಬರು ಪುತ್ರರು, ಪುತ್ರಿಯರು ಮೊಮ್ಮಕ್ಕಳು ಹಾಗೂ ಸೊಸೆಯಂದಿರು ಇದ್ದಾರೆ. ಮೃತರ ಅಂತಿಮಯಾತ್ರೆಯು ಮಂಗಳವಾರ ಬೆಳಿಗ್ಗೆ 9 ಗಂಟೆಗೆ ಬೆಳಧಡಿ ತಾಂಡಾದ ನಿವಾಸದಿಂದ ಹೊರಡಲಿದೆ.

# ಅನುದಾನ ಬಿಡುಗಡೆಗೊಳಿಸುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ರಾಜ್ಯದಲ್ಲಿ ಶೋಷಿತ ಸಮುದಾಯವಾಗಿರುವ ನದಾಫ್/ಪಿಂಜಾರ ಜನಾಂಗದ ಅಭಿವೃದ್ಧಿ ನಿಗಮಕ್ಕೆ ಹೆಚ್ಚಿನ ಅನುದಾನ ನೀಡಬೇಕು ಎಂದು ಗದಗ ಜಿಲ್ಲಾ ನದಾಫ್/ಪಿಂಜಾರ್ ಸಮಾಜದ ಉಪಾಧ್ಯಕ್ಷ ರಾಜಭಕ್ಷ ಹರ್ಲಾಪೂರ, ಮುಂಡರಗಿ ತಾಲೂಕು ನದಾಫ್/ಪಿಂಜಾರ್ ಸಮಾಜದ ಅಧ್ಯಕ್ಷ ಮೌಲಾಸಾಬ ನಧಾಫ್ ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.



ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘ ಮುಂಡರಗಿ ತಾಲೂಕು ಘಟಕದ ವತಿಯಿಂದ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಸಮುದಾಯವು ಮುಸ್ಲಿಂ ಒಳಪಂಗಡವಾಗಿ ಗುರುತಿಸುತ್ತಿದ್ದು, ಹಿಂದುಳಿದ ವರ್ಗಗಳ ಇಲಾಖೆಗೆ ಸಂಬಂಧಿಸಿದ ನದಾಫ್/ಪಿಂಜಾರ್ ಉಪ ಜಾತಿಯನ್ನು ಪ್ರವರ್ಗ-1ರ ಅಡಿಯಲ್ಲಿ ಮೀಸಲಾತಿ ಹೊಂದಿದೆ. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಹಾಗೂ ಇತರೆ ಯೋಜನೆಗಳಿಂದ ಸೌಲಭ್ಯ ಪಡೆದುಕೊಳ್ಳಲು ಸರ್ಕಾರದ ನಿರ್ದೇಶನ ಇದ್ದರೂ ಸತತವಾಗಿ ತಾಂತ್ರಿಕ ದೋಷ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಯಾವುದೇ ಯೋಜನೆಗಳು ಸರಿಯಾಗಿ ತಲುಪುತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಬಾಲೆಸಾಬ ನದಾಫ್, ರಸೂಲ್ ಸಾಬ ಮೌಲಾಸಾಬ ಕಿನ್ನಾಳ, ಪೀರಸಾಬ ಯ.ನದಾಫ್, ರಾಜೇಸಾಬ ಡಂಬಳ, ಮಾಬುಸಾಬ ಕವಲೂರ, ಪ್ರೇಮಸಾಬ ಹರ್ಲಾಪೂರ, ಇಮಾಮಸಾಬ ಕಲ್ಲೂರ, ಕುಮಾರಸಾಬ ಹಳ್ಳಿಗುಡಿ, ರಾಜೇಸಾಬ ಇಮಾಮಸಾಬ ನದಾಫ್, ರಮಜಾನಸಾಬ ನದಾಫ್, ರೈಮನಸಾಬ ನದಾಫ್, ದಾವಲಸಾಬ ಮಾಬುಸಾಬ ಮತ್ತೂರ, ಶರೀಫಸಾಬ ಯ.ನದಾಫ್, ಕರೀಮಸಾಬ ನದಾಫ್, ಹುಸೇನಸಾಬ ನದಾಫ್, ಬಾಷೇಸಾಬ ನದಾಫ್, ಮೌಲಾಸಾಬ ವೆಂಕಟಾಪೂರ, ಅಲ್ಲಾಸಾಬ ನದಾಫ್, ಹಸನಸಾಬ ನದಾಫ್, ಅಲ್ಲಾಭಕ್ಷ ದಾವಲಸಾಬ್ ಕೊಪ್ಪಳ, ಫಕ್ರುದ್ದೀನ್ ಹರ್ಲಾಪುರ್, ಚಮನ್ ಸಾಬ್ ಜಂತ್ಲಿ, ಅಲ್ಲಾಭಕ್ಷಿ ಖಾಸಿಂಸಾಬ್ ನದಾಫ್ ಮುಂತಾದವರಿದ್ದರು.

**ಪಿಂಜಾರ, ನದಾಫ್ ತಾಲೂಕು ಘಟಕದಿಂದ ಸಿಎಂಗೆ ಮನವಿ**

# ಅಗತ್ಯ ಅನುದಾನ ನೀಡಲು ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರಾಜ್ಯ ಸರ್ಕಾರವು ಪಿಂಜಾರ, ನದಾಫ್ ಹಾಗೂ 13 ಜಾತಿಗಳ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡಬೇಕು ಎಂದು ಆಗ್ರಹಿಸಿ ಸ್ಥಳೀಯ ಪಿಂಜಾರ/ನದಾಫ್ ತಾಲೂಕು ಘಟಕದ ಪದಾಧಿಕಾರಿಗಳು ಸೋಮವಾರ ಪಟ್ಟಣದ ತಹಸೀಲ್ದಾರ್ ಮೂಲಕ ಸಿಎಂಗೆ ಮನವಿ ಸಲ್ಲಿಸಿದರು.



ರಾಜ್ಯದಲ್ಲಿ ಪಿಂಜಾರ, ನದಾಫ್ ಸೇರಿ 13 ಜಾತಿಗಳ ಸಮುದಾಯವು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ರಾಜಕೀಯ ಸೇರಿ ಹಲವು ಕ್ಷೇತ್ರಗಳಲ್ಲಿ ಅತ್ಯಂತ ಹಿಂದುಳಿದ ಮತ್ತು ಕಡುಬಡತನದಲ್ಲಿ ಜೀವನವನ್ನು ನಡೆಸುತ್ತಿವೆ. ಇಂತಹ ಶೋಷಿತ ಸಮುದಾಯದ ಭಾಗದ ಈ ಜನಾಂಗ ಇಸ್ಲಾಂ ಧರ್ಮದ ಮುಸ್ಲಿಂ (ಅಲ್ಪಸಂಖ್ಯಾತರ) ಪಂಗಡದಲ್ಲಿದ್ದರೂ ಸಹ ಸರ್ಕಾರದ ವೃತ್ತಿಪರ ಜಾತಿಗಳ ವಿಂಗಡನೆ ಅನ್ವಯ ನಧಾಪ್, ಪಿಂಜಾರ ಉಪ ಪಂಗಡಕ್ಕೆ ಸೇರಿದೆ. ಸರ್ಕಾರದ ನಿರ್ದೇಶನದಂತೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಮತ್ತು ಇತರ ಯೋಜನೆಗಳ ಲಾಭ ಪಡೆಯಲು ತಾಂತ್ರಿಕ ತೊಂದರೆ ಮತ್ತು ಅಧಿಕಾರಗಳ ನಿರ್ಲಕ್ಷ್ಯದಿಂದ ಸರ್ಕಾರದ ಸೌಲಭ್ಯಗಳು ನಮಗೆ ಸಿಗದಂತಾಗಿವೆ ಎಂದು ದೂರಿದರು.

ಚುನಾವಣಾ ದಿನಗಳಲ್ಲಿ ತಾವು ಬಡಪರ ಪರ ಹಾಗೂ ಸಾಮಾಜಿಕ ನ್ಯಾಯವನ್ನು ನೀಡುವ ದಿಟ್ಟ ಸರ್ಕಾರ ಎಂದು ಪ್ರಚಾರ ಪಡೆಯುತ್ತೀರಿ. ರಾಜ್ಯದಲ್ಲಿ 25 ಲಕ್ಷ ಜನಸಂಖ್ಯೆ ಹೊಂದಿದ ನಮ್ಮಂತಹ ಬಡ ಸಮಾಜಗಳನ್ನು ಕಡೆಗಣನೆ ಮಾಡುವುದು ಘೋರ ಅನ್ಯಾಯ. ಹೀಗಾಗಿ ಪಿಂಜಾರ, ನದಾಫ್ ಪ್ರತ್ಯೇಕ ನಿಗಮಕ್ಕೆ ಅವಶ್ಯವಿರುವ ಅನುದಾನವನ್ನು ನೀಡಬೇಕು. ಇಲ್ಲದಿದ್ದರೆ ಹಿಂದುಳಿದ ಸಮಾಜಗಳಿಗೆ ಅನ್ಯಾಯ ಎಸಗತ್ತಿರುವ ಕುರಿತು ರಾಜ್ಯಾದ್ಯಂತ ಸಾರ್ವಜನಿಕರ ಗಮನಕ್ಕೆ ತರಲು ಬಹಿರಂಗವಾಗಿ ಪ್ರತಿಭಟನೆ, ಧರಣಿಗಳನ್ನು ನಡೆಸುತ್ತೇವೆ ಎಂದು ಎಚ್ಚರಿಸಿದರು.

ಸಂಘಟನೆಯ ತಾಲೂಕಾಧ್ಯಕ್ಷ ಬಾಬನಸಾಬ ನದಾಫ, ಪ್ರಧಾನಕಾರ್ಯದರ್ಶಿ ಡಿ.ಎಚ್. ನದಾಫ, ಯಮನೂರಸಾಬ ಕಳ್ಳಿಗುಡಿ, ಜಾಕೀರಹುಸೇನ ನಧಾಪ, ವಜೀರಸಾಬ ನದಾಫ, ಹಸನಸಾಬ ನದಾಫ, ರಾಜಾಭಕ್ಷಿ ನಧಾಪ, ಇಮಾಮಸಾಬ ನದಾಫ, ರೋಷನಬಿ ಶಿರಗುಂಪಿ, ಮಮ್ತಾಜಬೇಗಂ, ಪೀರಮಾ, ಅಲ್ಲಾಬಿ, ರಹಿಮಾನಬಿ, ರೇಷ್ಮಾ ಸೇರಿ ಇತರರು ಪಾಲ್ಗೊಂಡಿದ್ದರು.

# ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಿಂಜಾರ/ನದಾಫ್ ಹಾಗೂ ಇತರ 13 ಜಾತಿಗಳ ಅಭಿವೃದ್ಧಿ ನಿಗಮಕ್ಕೆ ಅನುದಾನ ನೀಡುವಂತೆ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.




ಈ ಸಂದರ್ಭದಲ್ಲಿ ಕೆ.ಎಫ್. ಹಳ್ಯಾಳ ಮಾತನಾಡಿ, ಸರಕಾರದ ನಿರ್ದೇಶನದಂತೆ ಅಭಿವೃದ್ಧಿ ನಿಗಮದಿಂದ ಮತ್ತು ಇತರ ಯೋಜನೆಗಳಿಂದ ಸೌಲಭ್ಯಗಳನ್ನು ಪಡೆದುಕೊಳ್ಳಲು ಸರಕಾರದ ನಿರ್ದೇಶನ ಇದ್ದರೂ, ಸತತವಾಗಿ ತಾಂತ್ರಿಕ ದೋಷಗಳಿಂದ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯತೆಯಿಂದ ಯಾವದೇ ಯೋಜನೆಗಳು ಸರಿಯಾಗಿ ತಲುಪದೇ ವಂಚಿತರಾಗಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಎಂ.ಬಿ. ನದಾಫ್, ಶೌಕತಅಲಿ ಎಂ.ಅಣ್ಣಿಗೇರಿ, ಹೆಚ್.ಆರ್. ನದಾಫ್, ಝಾಕೀರ ಬಾಗಲಕೋಟ, ಮೈನುದ್ದೀನ ಬಿಜಾಪೂರ, ಆರ್.ವಾಯ್. ನದಾಫ್, ಹುಸೇನಸಾಬ ಬೆಳಹೊಡ, ಫಕರುಸಾಬ ನದಾಫ್, ರಾಜೇಸಾಬ ಶಿಶ್ವಿನಹಳ್ಳಿ, ಎ.ಎಕೆ. ನದಾಫ್, ಶರೀಪ ಮದರಿ, ತೌಜಲಿ ನದಾಫ್, ರಿಯಾಝು ನದಾಫ್, ರಿಯಾಝು ಇಲಾಳಿ, ಆಸೀಪ ನದಾಫ್, ಉಪಸ್ಥಿತರಿದ್ದು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ಪುರಸಭೆ ಕಾರ್ಯಾಲಯ ಡೇ-ನಲ್ಮ್ ಯೋಜನೆಯ ಬೀದಿ ಬದಿ ವ್ಯಾಪಾರಿಗಳ ಮತ್ತು ಆತ್ಮನಿರ್ಭರ ನಿಧಿ ಯೋಜನೆಯಡಿ ಕರ್ನಾಟಕ ಬೀದಿ ಬದಿ ವ್ಯಾಪಾರ ನಿಯಮದಂತೆ ನಗರದ ಸ್ಥಳೀಯ ಸಂಸ್ಥೆಯ ಮಟ್ಟದಲ್ಲಿ ಬೀದಿ ಬದಿ ವ್ಯಾಪಾರಿಗಳ ಕುಂದುಕೊರತೆಗಳ ಪರಿಹಾರ ಸಮಿತಿಗೆ ಅಧ್ಯಕ್ಷರನ್ನು ಮತ್ತು 2 ಸದಸ್ಯರನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿದೆ.

ಸಮಿತಿಯ ಅಧ್ಯಕ್ಷರಾಗಬಯಸುವವರು ನಿವೃತ್ತ ಸಿವಿಲ್ ನ್ಯಾಯಾಧೀಶರಾಗಿರಬೇಕು ಮತ್ತು 65 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿರಬೇಕು. ಹಾಗೆ ಆಯ್ಕೆ ಸಮಿತಿಯ ಸದಸ್ಯರಾಗಲು ರಾಜ್ಯ ಸರ್ಕಾರದ ನಿವೃತ್ತ ವರ್ಗ-1 ಅಧಿಕಾರಿಯಾಗಿರಬೇಕು ಮತ್ತು 65 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿರಬೇಕು. ಸ್ಥಳೀಯ ಪ್ರದೇಶದಲ್ಲಿ ಸೇವಾ ದಾಖಲೆ ಹೊಂದಿರಬೇಕು. ಪ್ರಸ್ತಾವಿತ ಸಮಿತಿಯ ಅವಧಿಯು ಬಿಡುಗಡೆಯಾದ ದಿನಾಂಕದಿಂದ 5 ವರ್ಷಗಳವರೆಗೆ ಚಲಾವಣೆಯಲ್ಲಿರುತ್ತದೆ.

ಸಮಿತಿಯ ಕಾರ್ಯಾಚರಣೆಯ ಅಧಿಕಾರ ವ್ಯಾಪ್ತಿಯನ್ನು ಕಾಲ ಕಾಲಕ್ಕೆ ಸರ್ಕಾರವು ಸೂಚಿಸುತ್ತದೆ.

ಸಮಿತಿಯ ಅಧ್ಯಕ್ಷರಾಗಿ ನಿವೃತ್ತ ಸಿವಿಲ್ ನ್ಯಾಯಧೀಶರು ಅಥವಾ ಮ್ಯಾಜಿಸ್ಟ್ರೇಟ್ ಅರೆಕಾಲಿಕ ಆಧಾರದ ಮೇಲೆ ನೇಮಕಗೊಂಡರೆ ಒಂದು ಸಭೆಗೆ ರೂ 2500=00 ಹಾಗೂ ಕುಂದು ಕೊರತೆ ಪರಿಹಾರ ಸಮಿತಿಯ ಇತರೆ ಸದಸ್ಯರು ಅರೆಕಾಲಿಕ ನೇಮಕಗೊಂಡರೆ ಒಂದು ಸಭೆಗೆ ರೂ 1000=00 ಗೌರವಧನ ಪಡೆಯುತ್ತಾರೆ. ಅರ್ಜಿ ಆಹ್ವಾನ ಪ್ರಕಟಗೊಂಡ 30 ದಿನಗಳ ಒಳಗಾಗಿ ರೋಣ ಪುರಸಭೆ ಕಾರ್ಯಾಲಯದ ಡೇ ನಲ್ಮ್ ವಿಭಾಗದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೋಣ ಪುರಸಭೆ ಕಾರ್ಯಾಲಯದ ಡೇ ನಲ್ಮ್ ವಿಭಾಗದಲ್ಲಿ ಸಂಪರ್ಕಿಸಬಹುದಾಗಿದೆ.

# ನಟರಂಗ ಸಂಸ್ಥೆಯ ವತಿಯಿಂದ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಗದಗ ಸೆಂಟ್ರಲ್ ವತಿಯಿಂದ 2023-24ನೇ ಸಾಲಿನಲ್ಲಿ ಬಡಮಕ್ಕಳ ಶಿಕ್ಷಣಕ್ಕಾಗಿ ಆರ್ಥಿಕ ನೆರವು, ಪ್ರತಿಭಾವಂತ ಕಲಾವಿದರಿಗೆ ಪ್ರೋತ್ಸಾಹ, ಉಚಿತ ಬೃಹತ್ ಆರೋಗ್ಯ ತಪಾಸಣೆ ಶಿಬಿರ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಾಗೂ ಮಹಿಳೆಯರ ಸ್ವಾವಲಂಬಿ ಜೀವನಕ್ಕಾಗಿ ಅನೇಕ ಉಚಿತ ತರಬೇತಿಗಳನ್ನು, ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯೋಗ ಮೇಳ ಹೀಗೆ ಅನೇಕ ವಿವಿಧ ರಚನಾತ್ಮಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮಾಡುವುದರ ಮೂಲಕ ಸಮಾಜ ಸೇವೆಯನ್ನು ಮಾಡಿದ ರೋಟರಿ ಗದಗ ಸೆಂಟ್ರಲ್‌ನ ಮಾಜಿ ಅಧ್ಯಕ್ಷ ವಿಜಯಕುಮಾರ್ ಹಿರೇಮಠ, ಕಾರ್ಯದರ್ಶಿ ಡಾ. ಸಂತೋಷ ತೋಟಗಂಟಿಮಠ, ಕೋಶಾಧ್ಯಕ್ಷ ಸುನಿಲ್ ಕಬಾಡಿ ದಂಪತಿಗಳಿಗೆ ನಟರಂಗ ಸಂಸ್ಥೆಯ ಪರವಾಗಿ ಅಧ್ಯಕ್ಷರಾದ ಸೋಮಶೇಖರ್ ಚಿಕ್ಕಮಠ ಅವರು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ರೋಟರಿ ಗದಗ ಸೆಂಟ್ರಲ್‌ನ ನೂತನ ಅಧ್ಯಕ್ಷ ರಾಮನಗೌಡ ದಾನಪ್ಪಗೌಡರ್ ದಂಪತಿಗಳು, ಹಿರಿಯರಾದ ಪಿ.ಸಿ. ಹಿರೇಮಠ್, ಅಪ್ಪುರಾಜ್ ಭದ್ರಕಾಳಮ್ಮನಮಠ, ಸಂಜಯ್ ಸಿಂದಿಗೇರಿ, ಎಂ.ಜಿ. ಹೂಗಾರ ಮುಂತಾದವರು ಉಪಸ್ಥಿತರಿದ್ದರು.

**ಕುಸಿದ ಕಿರು ಸೇತುವೆ । ಬಸ್ ಸಂಚಾರ ಸ್ಥಗಿತ । ಸಾರ್ವಜನಿಕರಿಗೆ ತಪ್ಪದ ಗೋಳು**

# ಕೊಂಕಣ ಸುತ್ತಿ ಮೈಲಾರಕ್ಕೆ...

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರ ಗ್ರಾಮದ ಹತ್ತಿರ ರಸ್ತೆಗೆ ಅಡ್ಡಲಾಗಿ ನಿರ್ಮಿಸಿದ ಕಿರು ಸೇತುವೆ ಮಳೆಯಿಂದಾಗಿ ಕುಸಿದಿದ್ದು, ಆ ಮಾರ್ಗದ ಬಸ್ ಸಂಚಾರ ಸ್ಥಗಿತಗೊಂಡು ಜನರು ಸಂಚಾರಕ್ಕಾಗಿ ಪರದಾಡುವಂತಾಗಿದೆ.

ಕಳೆದ 15/20 ದಿನಗಳ ಹಿಂದೆಯೇ ಸೂರಣಗಿಯಿಂದ ಬಾಲೆಹೊಸೂರಿಗೆ ಸಂಪರ್ಕ ಕಲ್ಪಿಸುವ ಮಾರ್ಗ ಮಧ್ಯದ ಸೇತುವೆಯು ಕುಸಿದು ಅಪಾಯಕ್ಕೆ ಆಹ್ವಾನ ನೀಡುವಂತಾಗಿತ್ತು. ಈ ಬಗ್ಗೆ ಪಿಡಬ್ಲ್ಯೂಡಿ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಇದೀಗ ರಸ್ತೆಗೆ ಅಡ್ಡಲಾಗಿ ಅಳವಡಿಸಿರುವ ಕಿರು ಸೇತುವೆ ಸಂಪೂರ್ಣ ಕುಸಿದಿದ್ದು, ವಾಹನ ಸಂಚಾರ ಸ್ಥಗಿತಗೊಂಡಿದೆ. ಬೈಕ್ ಹೊರತುಪಡಿಸಿ 4 ಚಕ್ರದ ವಾಹನ, ಚಕ್ಕಡಿ ಹಾದು ಹೋಗದಂತಾಗಿದ್ದು ಜನತೆ, ರೈತರು ಪರದಾಡುವಂತಾಗಿದೆ.



ಬಾಲೆಹೊಸೂರ ಸೇರಿ ಈ ಭಾಗದ ಹಾಲಗಿ, ಮರೂಳ, ನೆಗಳೂರ, ಕೆರೆಕೊಪ್ಪ, ಮಾದಾಪುರ, ಮರಡೂರ ಸೇರಿ ಹಲವು ಗ್ರಾಮಗಳ ಜನರು ನಿತ್ಯ ವ್ಯಾಪಾರ-ವಹಿವಾಟು, ಶಿಕ್ಷಣ ಅನೇಕ ಕಾರಣಗಳಿಗಾಗಿ ಲಕ್ಷ್ಮೇಶ್ವರಕ್ಕೆ ಬರುತ್ತಾ-ರೆ. ಆದರೆ ಲಕ್ಷ್ಮೇಶ್ವರಕ್ಕೆ ಬರುವ ಬಸ್ ಸಂಚಾರ ಸ್ಥಗಿತಗೊಂಡು, ಈ ಭಾಗದ ಜನರು ಅನಿವಾರ್ಯವಾಗಿ ಸುತ್ತುವರಿದು ಸಂಚರಿಸುವಂತಾಗಿದೆ. ನಿತ್ಯ ಶಾಲಾ-ಕಾಲೇಜಿಗೆ ಹೋಗುವ ಮಕ್ಕಳು, ಇತರೆ ಕಾರಣಗಳಿಗೆ ಊರಿಗೆ ಹೋದವರನ್ನು ಸೂರಣಗಿಯಿಂದ ಬೈಕ್ ಮೂಲಕ ಕರೆದುಕೊಂಡು ಹೋಗಬೇಕಾಗಿದೆ ಎಂದು ತಾವು ಅನುಭವಿಸುತ್ತಿರುವ ಸಮಸ್ಯೆಯನ್ನು ಗ್ರಾಮದ ಸಿ.ಎಫ್. ಹಿರೇಮಠ ಪತ್ರಿಕೆಯೊಂದಿಗೆ ಹಂಚಿಕೊಂಡರು.

ತಾಲೂಕಿನ ಬಡ್ನಿ ಹತ್ತಿರದ ಹಳ್ಳದ ಸೇತುವೆಯ ಪರಿಸ್ಥಿತಿಯೂ ಇದೇ ಆಗಿದ್ದು, ಜಿಲ್ಲಾಧಿಕಾರಿಗಳ ಸೂಚನೆಯ ಹಿನ್ನೆಲೆಯಲ್ಲಿ ಲಕ್ಷಾಂತರ ರೂ ಖರ್ಚು ಮಾಡಿ ತಾತ್ಕಾಲಿಕ ದುರಸ್ಥಿ ಮಾಡಲಾಗಿದ್ದರೂ ಅಪಾಯ ತಪ್ಪದಂತಾಗಿದೆ. ಶಾಶ್ವತ ಪರಿಹಾರಕ್ಕೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಈ ಮಾರ್ಗದ ರಸ್ತೆ ಸಂಪೂರ್ಣ ಹಾಳಾಗಿ ವರ್ಷಗಳೇ ಕಳೆದರೂ ದುರಸ್ಥಿ ಕಾಣದ್ದರಿಂದ ಈ ಮಾರ್ಗದ ಪ್ರಯಾಣದಿಂದ ಜನರು ನರಕ ಯಾತನೆ ಅನುಭವಿಸುತ್ತಿದ್ದಾರೆ. ಬಸ್ ಸಂಪರ್ಕ ಕಡಿತಗೊಳಿಸಿದ್ದರಿಂದ ನಿತ್ಯ ರೈತರು ಬೆಳೆದ ತರಕಾರಿ, ಹೂವು, ಹೈನುಗಾರಿಕೆ ಪದಾರ್ಥಗಳನ್ನು ಸಾಗಿಸಲು ಕಷ್ಟವಾಗುತ್ತಿದೆ. ಶಾಲಾ-ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳ ಶಿಕ್ಷಣ, ವೈದ್ಯಕೀಯ ಚಿಕಿತ್ಸೆಗೆ ಹೋಗಲು ಅಡ್ಡಿಯಾಗುತ್ತದೆ. ಪಿಡಬ್ಲ್ಯೂಡಿ ಇಲಾಖೆಯ ಅಧಿಕಾರಿಗಳು, ಜನಪ್ರತಿನಿಧಿಗಳು ಕಿರು ಸೇತುವೆ, ರಸ್ತೆ ದುರಸ್ಥಿಗೊಳಿಸಿ ಜನರ ಅನುಭವಿಸುತ್ತಿರುವ ಪರದಾಟ ತಪ್ಪಿಸಬೇಕು ಎಂದು ಗ್ರಾಮಾಭಿವೃದ್ಧಿ ಹೋರಾಟ ಸಮಿತಿ ಅಧ್ಯಕ್ಷ ಬಸವರೆಡ್ಡಿ ಹನಮರೆಡ್ಡಿ ಆಗ್ರಹಿಸಿದ್ದಾರೆ.



ಈ ಕುರಿತು ಪಿಡಬ್ಲ್ಯೂಡಿ ಇಲಾಖೆ ಎಇಇ ಅವರನ್ನು ಸಂಪರ್ಕಿಸಲಾಗಿ, ತಾಲೂಕಿನಲ್ಲಿ ಹಲವು ಕಡೆ ಮಳೆಯಿಂದಾಗಿ ಕಿರು ಸೇತುವೆಗಳು ಕುಸಿದಿದ್ದು ಅನುದಾನದ ಕೊರತೆಯಿಂದ ತಾತ್ಕಾಲಿಕವಾಗಿ ದುರಸ್ಥಿ ಮಾಡಲಾಗುತ್ತಿದೆ. ಶಾಶ್ವತ ಪರಿಹಾರಕ್ಕಾಗಿ ಕ್ರಿಯಾಯೋಜನೆ ಸಿದ್ಧಪಡಿಸಿ ಇಲಾಖೆಗೆ ಕಳುಹಿಸಲಾಗಿದೆ. ಅನುದಾನ ಮಂಜೂರಾದ ಬಳಿಕ ಕಾಮಗಾರಿ ಕೈಗೊಳ್ಳಲಾಗುವುದು ಎಂದಿದ್ದಾರೆ.

ಈ ಕುರಿತು ಲಕ್ಷ್ಮೇಶ್ವರ ಸಾರಿಗೆ ಘಟಕದ ವ್ಯವಸ್ಥಾಪಕರಾದ ಸವಿತಾ ಆದಿ ಅವರನ್ನು ಸಂಪರ್ಕಿಸಲಾಗಿ, ತಾಲೂಕಿನ ಬಹುತೇಕ ರಸ್ತೆಗಳು ಹಾಳಾಗಿವೆ ಮತ್ತು ಮಾರ್ಗದ ಕಿರು ಸೇತುವೆಗಳ ಮೇಲಿನ ಸಂಚಾರ ಅಪಾಯ ತಂದೊಡ್ಡಲಿವೆ. ಸಮಸ್ಯೆ ಇರುವ ಬಾಲೆಹೊಸೂರ ಮತ್ತು ಬಡ್ನಿ ಮಾರ್ಗದ ಬಸ್ ಸಂಚಾರ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ದುರಸ್ಥಿಯಾಗುತ್ತಿದ್ದಂತೆಯೇ ಸಂಚಾರ ಪುನಃ ಪ್ರಾರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

## ತೋಟಗಾರಿಕೆ ಕ್ಷೇತ್ರಕ್ಕೆ ಸುರೇಶ ಕುಂಬಾರ ಭೇಟಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿಯ ಗೋಡಂಬಿ, ಮಾವು ಮತ್ತು ಹೊಸ ತೋಟ ನಿರ್ಮಾಣದ ಕ್ಷೇತ್ರಕ್ಕೆ ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ಭೇಟಿ ನೀಡಿ ರೈತರಿಗೆ ಸಲಹೆಗಳನ್ನು ನೀಡಿದರು.

ನಂತರ ಮಾತನಾಡಿದ ಸುರೇಶ ಕುಂಬಾರ, ಎರಡೂ ತಾಲೂಕುಗಳಲ್ಲಿ ಉತ್ತಮವಾಗಿ ಮಳೆಯಾಗುತ್ತಿದ್ದು, ತೋಟಗಾರಿ-ಕೆ ಬಹುವಾರ್ಷಿಕ ಬೆಳೆಗಳಾದ ಗೋಡಂಬಿ, ಮಾವು, ತೆಂಗು ಮುಂತಾದವುಗಳನ್ನು ನಾಟಿ ಮಾಡುವ ಕಾರ್ಯ ಭರದಿಂದ ಸಾಗಿದೆ. ಈ ಭಾಗದಲ್ಲಿ ಮಣ್ಣು, ನೀರು ಹಾಗೂ ಹವಾಗುಣವು ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸೂಕ್ತವಾಗಿದೆ. ರೈತರು ಬಹಳ ಆಸಕ್ತಿಯಿಂದ ಬೆಳೆ ನಾಟಿ ಮಾಡಲು ಪ್ರಾರಂಭಿಸಿದ್ದಾರೆ. ಆದ್ದರಿಂದ ರೈತರ ಕ್ಷೇತ್ರಗಳಿಗೆ ಭೇಟಿ ನೀಡಿ ಮಾಹಿತಿ ನೀಡಲಾಗುತ್ತಿದೆ ಎಂದರು.

ವಯಸ್ಸು 60 ಸಮೀಪಿಸುತ್ತಿದ್ದರೂ ಸಹ ಯುವಕರೂ ನಾಚುವಂತೆ ಸುರಿಯುತ್ತಿರುವ ಮಳೆಯನ್ನೂ ಲೆಕ್ಕಿಸದೇ ಶಿರಹಟ್ಟಿಯ ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ತಮ್ಮ ಇಲಾಖೆಯ ಕಾರ್ಯಕ್ರಮಗಳನ್ನು, ಅಗತ್ಯ ಸಲಹೆ-ಸೂಚನೆಗಳನ್ನು ಸ್ವತಃ ರೈತರ ಜಮೀನುಗಳಿಗೆ ತೆರಳಿ ನೀಡುತ್ತಿರುವ ಅವರ ಕರ್ತವ್ಯ ನಿಷ್ಠೆಗೆ ಅನೇಕ ರೈತರು ಪ್ರಶಂಸೆ ವ್ಯಕ್ತಪಡಿಸುತ್ತಿದ್ದಾರೆ.

## ಗುರುವಂದನಾ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಲ್ಲಿನ ಬಿಜೆಪಿ ನಗರ ಮಹಾಶಕ್ತಿ ಕೇಂದ್ರದ ವತಿಯಿಂದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಅಧ್ಯಕ್ಷತೆಯಲ್ಲಿ ಗುರುಪೌರ್ಣಿಮೆ ನಿಮಿತ್ತ ಸಮಸ್ತ ಗುರುಗಳಿಗೆ ಗುರುವಂದನಾ, ಗೌರವ ಸಮರ್ಪಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಎಚ್.ಎಂ. ದೇವಗಿರಿ, ನಿಂಗಪ್ಪ ಕರಿಗಾರ, ಕೆ.ಎ. ಬಳಿಗಾರ, ಎಂ.ಆರ್. ಥಾಲಾಯತ, ಸಿ.ಪಿ. ಕಾಳಗಿ, ಎನ್.ಆರ್. ಕುಲಕರ್ಣಿ, ಜಿ.ಆರ್. ಸರ್ಜಾಪೂರ, ಐ.ಜಿ. ಬಡಿಗೇರ, ರಾಮಪ್ಪ ಕಮತ ಇವರುಗಳಿಗೆ ಗೌರವ ಸಮರ್ಪಣೆ ಮಾಡಲಾಯಿತು.

ಫಕ್ಕೀರೇಶ ರಟ್ಟಿಹಳ್ಳಿ, ನಂದಾ ಪಲ್ಲೇದ, ರಾಮಣ್ಣ ಕಂಬಳಿ, ವೀರಣ್ಣ ಅಂಗಡಿ, ಅಕ್ಬರಸಾಬ ಯಾದಗಿರಿ, ಬಸವರಾಜ ತುಳಿ, ಗೂಳಪ್ಪ ಕರಿಗಾರ, ಅಶೋಕ ವರವಿ, ಪರಶುರಾಮ ಡೊಂಕಬಳ್ಳಿ, ಮಂಜುನಾಥ ಸೊಂಟನೂರ, ರವಿ ಹಳ್ಳಿ, ನಾಗೇಶ ಇಂಗಳಗಿ, ಶಿವು ಬಟ್ಟೂರ, ಮಲ್ಲಿಕಾರ್ಜುನ ಕಬಾಡಿ, ರೂಪಾ ಪಾಶ್ಚಾಪೂರ, ದೀಪಾ ಪಾಶ್ಚಾಪೂರ ಉಪಸ್ಥಿತರಿದ್ದರು.

## ಲೈಂಗಿಕ ದೌರ್ಜನ್ಯ ಪ್ರಕರಣ: ಸೂರಜ್ ರೇವಣ್ಣಗೆ ಷರತ್ತುಬದ್ಧ ಜಾಮೀನು ಮಂಜೂರು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇಬ್ಬರು ಯುವಕರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಪ್ರಕರಣದಲ್ಲಿ ಬಂಧಿತರಾಗಿರುವ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣಗೆ ಷರತ್ತುಬದ್ಧ ಜಾಮೀನು ನೀಡಿ ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು (ಜು.22) ಆದೇಶಿಸಿದೆ.

ಹಾಸನ ಜಿಲ್ಲೆ ಹೊಳೆನರಸೀಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ಜಾಮೀನು ಕೋರಿ ಸೂರಜ್ ರೇವಣ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯ, ಆದೇಶ ಕಾಯ್ದಿರಿಸಿತ್ತು. ಇಂದು ಎರಡೂ ಪ್ರಕರಣಗಳಲ್ಲಿ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ.

**ಗದಗ ಜಿಲ್ಲೆಯ ಆಡಳಿತ್ಮಾಕ ನ್ಯಾಯಮೂರ್ತಿ ವಿ.ಶ್ರೀಶಾನಂದ್**

## ಗುಣಮಟ್ಟದ ಕಾಮಗಾರಿಗೆ ಮುಂದಾಗಿ

ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಕಾಲಕಾಲೇಶ್ವರ ಮಾರ್ಗ ಮಧ್ಯೆ ಪುರಸಭೆ ಪಂಪ್‌ಹೌಸ್ ಹತ್ತಿರದಲ್ಲಿ ಸರ್ಕಾರ ನಿಗದಿಪಡಿಸಿದ ಸ್ಥಳದಲ್ಲಿ 9.80 ಕೋಟಿ ರೂ. ಅನುದಾನದಲ್ಲಿ ನೂತನ ನ್ಯಾಯಾಲಯ ಕಟ್ಟಡ ನಿರ್ಮಾಣದ ಜಾಗೆಯನ್ನು ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಗದಗ ಜಿಲ್ಲೆಯ ಆಡಳಿತ್ಮಾಕ ನ್ಯಾಯಮೂರ್ತಿ ವಿ.ಶ್ರೀಶಾನಂದ್ ರವಿವಾರ ಬೆಳಿಗ್ಗೆ ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ನಡೆಸಿದರು.



ಈ ಸಂದರ್ಭದಲ್ಲಿ ಅವರು ಮಾತನಾಡಿ, ನ್ಯಾಯಾಲಕ್ಕೆ ಇದುವರೆಗೂ ಸ್ವಂತ ಕಟ್ಟಡವಿರಲಿಲ್ಲ. ನ್ಯಾಯಾಲಯ ಕಲಾಪಗಳು ಈವರೆಗೆ ರೋಣ ರಸ್ತೆಯ ಬಳಿ ಕಟ್ಟದವೊಂದರ ಮೇಲ್ಭಾಗದಲ್ಲಿ ನಡೆಯುತ್ತಿದೆ. ಇದನ್ನು ಮನಗಂಡ ಸರ್ಕಾರ ನೂತನ ಕಟ್ಟಡವನ್ನು ಸುಸಜ್ಜಿತವಾಗಿ ನಿರ್ಮಿಸಲು 9.80 ಕೋಟಿ ರೂ ಅನುದಾನ ಬಿಡುಗಡೆ ಮಾಡಿದೆ. ಶೀಘ್ರದಲ್ಲಿ ಕಟ್ಟಡ ಕಾಮಗಾರಿ ಆರಂಭವಾಗಲಿದೆ ಎಂದರು.

ನೂತನ ನ್ಯಾಯಾಲಯ ಕಟ್ಟಡವು ನ್ಯಾಯಾಧೀಶರ ಕೊಠಡಿ, ಪಾರ್ಕಿಂಗ್ ವ್ಯವಸ್ಥೆ, ಶೌಚಾಲಯ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒಳಗೊಂಡಿದೆ. ಶಾಲೆ, ಆಸ್ಪತ್ರೆ, ಕೋರ್ಟ್ ನಿರ್ಮಾಣ ಕಾರ್ಯದಲ್ಲಿ ಗುತ್ತಿಗೆದಾರರು ಶ್ರದ್ಧೆಯಿಂದ ಗುಣಮಮಟ್ಟದ ಕಾಮಗಾರಿ ನಡೆಸಲು ಮುಂದಾಗಬೇಕು ಎಂದು ಇಂಜಿನಿಯರ್‌ಗಳಿಗೆ ಸೂಚಿಸಿದರು.

ಜಿಲ್ಲಾ ಸತ್ರ ನ್ಯಾಯಾಧೀಶರಾದ ಬಸವರಾಜ, ರೋಣ ಕೋರ್ಟ್ ನ್ಯಾಯಾಧೀಶರಾದ ಭರತಕುಮಾರ ಕರಗುದರಿ, ವಕೀಲರಾದ ಬಿ.ಎಂ. ಸಜ್ಜನ, ಆರ್.ಎಂ. ರಾಯಬಾಗಿ, ಬಿ.ಎಸ್. ಹಿಡ್ಕಿಮಠ, ಬಾಲು ರಾಠೋಡ, ಎಂ.ಎಚ್. ಕೋಲಕಾರ, ತಿಮ್ಮನಗೌಡರ, ಎಂ.ಎಸ್. ಪಡಪದ, ರಾಘು ಭಂಜಂತ್ರಿ, ಶ್ರೀಕಾಂತ ಅವದೂತ, ಕೆ.ಎಂ. ನಂದನಜವಳೇಕರ, ಪಿಎಸ್‌ಐ ಸೋಮನಗೌಡ್ರ ಗೌಡರ, ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ, ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಸೇರಿ ಇತರರು ಇದ್ದರು.

## ಹಡಪದ ಅಪ್ಪಣನ ಕಾಯಕ ತತ್ವ ಪಾಲಿಸಿ

ವಿಜಯಸಾಕ್ಷಿ ಸುದ್ದಿ, ಮುಳಗುಂದ

12ನೇ ಶತಮಾನದಲ್ಲಿ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿ ವಚನ ಸಾಹಿತ್ಯದ ಮೂಲಕ ಜನರ ಬಾಳು ಬೆಳಗಲು ಶ್ರಮಿಸಿದ ಶರಣ ಹಡಪದ ಅಪ್ಪಣ್ಣನ ಕಾಯಕ ಮತ್ತು ವಚನ ತತ್ವಗಳನ್ನು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಿವಪ್ಪ ಆನಂದರಭಾವಿ ಹೇಳಿದರು.



ಅವರು ಪಟ್ಟಣದ ಹಡಪದ ಅಪ್ಪಣ್ಣ ಸಂಘದ ವತಿಯಿಂದ ಹಡಪದ ಅಪ್ಪಣ್ಣ ಮಂದಿರದಲ್ಲಿ ಹಮ್ಮಿಕೊಂಡಿದ್ದ ಜಯಂತಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ನಮ್ಮ ಸಮಾಜ ಕಾಯಕ ತತ್ವವನ್ನು ನಿತ್ಯ ನಿಷ್ಠೆಯಿಂದ ಮಾಡುತ್ತಾ ಬಂದಿದ್ದು, ಇದರಿಂದ ಆರ್ಥಿಕವಾಗಿ ಸದೃಢರಾಗಲು ಸಾಧ್ಯವಿದೆ. ಮಕ್ಕಳನ್ನು ಶೈಕ್ಷಣಿಕವಾಗಿ, ಸುಸಂಸ್ಕೃತರನ್ನಾಗಿ ಮಾಡಬೇಕು ಹಾಗೂ ಹಡಪದ ಅಪ್ಪಣ್ಣನವರ ಚವನಗಳನ್ನು ನಿತ್ಯ ಪಾಲಿಸಬೇಕು ಎಂದರು.

ಗಿರೀಶ ಆನಂದರಭಾವಿ, ಬಾಲಚಂದ್ರ ಹಡಪದ, ರಾಜು ಹಡಪದ, ಸಂಗಮೇಶ ಕ್ಷೌರದ, ನಿಂಗಪ್ಪ ಆನಂದರಭಾವಿ, ಮಾಹಾಂತಪ್ಪ ಕುತ್ನಿ, ಮಂಜುನಾಥ ಕುತ್ನಿ, ಚಿನ್ನು ಕುತ್ನಿ, ಮಾಹಾಂತೇಶ ಆನಂದರಭಾವಿ ಹಾಗೂ ಸಮಾಜದ ಮಹಿಳೆಯರು ಇದ್ದರು.

## ಮಹರ್ಷಿ ವೇದವ್ಯಾಸ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ಮಹರ್ಷಿ ವೇದವ್ಯಾಸರ ಜಯಂತಿಯನ್ನು ನಗರದ ಸುಣಗಾರ ಓಣಿಯಲ್ಲಿ ಆಚರಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿದ ಮಹಾದೇವ ಬಾಣದ ಮಾತನಾಡಿ, ಸಮಾಜ ಬಾಂಧವರು ಪೂರ್ವಜರ ವಿಶೇಷ ಸಂಸ್ಕೃತಿ ನೀಡಿದ ವೇದಗಳನ್ನು ನಾಡಿಗೆ ಕೊಡುಗೆ ನೀಡಿದ ಮಹರ್ಷಿ ವೇದವ್ಯಾಸ ಜಯಂತಿ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಿ ಎಂದರು.



ಸಭೆಯ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ಜಿಲ್ಲಾಧ್ಯ ರಾಮಣ್ಣ ಇರಕಲ್ಲ ವಹಿಸಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಮಾತನಾಡಿ, ಸಮಾಜ ಬಾಂಧವರು ಒಗ್ಗಟ್ಟಿನಿಂದ ಸಾಧಕರನ್ನು ಗುರುತಿಸಿ ಸನ್ಮಾನಿಸುವುದರೊಂದಿಗೆ ಸಮಾಜದಲ್ಲಿ ಆಗಿ ಹೋದ ಮಹಾನ್ ಚೇತನಗಳ ಜಯಂತಿ ಆಚರಿಸುತ್ತಿರುವುದು ಶ್ಲಾಘನೀಯ ಎಂದರು.

ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು. ಈ ಸಂದರ್ಭದಲ್ಲಿ ಕೆಪಿಸಿಸಿ ಮೀನುಗಾರರ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ, ರಾಘವೇಂದ್ರ ಗುಡಿಸಾಗರ, ಬಸವರಾಜ ಗುಡಿಸಾಗರ, ಸಹಕಾರ್ಯದರ್ಶಿ ರವಿಕುಮಾರ ಗುಡಿಸಾಗರ, ಸಂಘಟನಾ ಕಾರ್ಯದರ್ಶಿ ಅಮಿತ ಪೂಜಾರ, ರಾಜು ಪೂಜಾರ, ಪ್ರಕಾಶ ಬಿನ್ನಾಳ, ಆನಂದ ಸುಣಗಾರ, ಮಹಿಳಾ ಅಧ್ಯಕ್ಷರಾದ ಸುಜಾತಾ ಗುಡಿಸಾಗರ, ಗಿರಿಜಾ ಬಾರಕೇರ ಕವಿತಾ ಗುಡಿಸಾಗರ, ಹರೀಶ ಬಾರಕೇರ, ರಾಜು ಪೂಜಾರ, ರಾಜು ಬಾರಕೇರ, ಪ್ರಕಾಶ ಬಾಣದ, ಪ್ರಕಾಶ ನಾಗರಾಳ, ಮಾರುತಿ ಬಾರಕೇರ, ವಿನೋದ ಬಾರಕೇರ ಸೇರಿದಂತೆ ಸಮಾಜ ಬಾಂಧವರು ಪಾಲ್ಗೊಂಡಿದ್ದರು.

## ಮುತ್ತಣ್ಣ ಹಡಪದಗೆ ‘ಕಾಯಕ ರತ್ನ’ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್




ಪಟ್ಟಣದ ಬಸ್ ನಿಲ್ದಾಣದ ವಾಣಿಜ್ಯ ಮಳಿಗೆಯಲ್ಲಿ ಸಲೂನ್ ಇಟ್ಟುಕೊಂಡು ನಿಷ್ಠೆಯಿಂದ ತನ್ನ ಕಾಯಕ ನಡೆಸುತ್ತಿರುವ ಮುತ್ತಣ್ಣ ಹಡಪದಗೆ ‘ಕಾಯಕ ರತ್ನ’ ಪ್ರಶಸ್ತಿ ದೊರಕಿದೆ. ಕರ್ನಾಟಕ ಸರಕಾರ ಮತ್ತು ಗದಗ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನಿಜಸುಖಿ ಹಡಪದ ಶ್ರೀ ಅಪ್ಪಣ್ಣನವರ ಆದರ್ಶಗಳನ್ನು ಅಳವಡಿಸಿಕೊಂಡು ನಿಷ್ಠೆ ಮತ್ತು ಬದ್ಧತೆಯಿಂದ, ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಸೇವಾ ಮನೋಭಾವದಿಂದ ಕುಲ ಕಾಯಕವ ಮಾಡುತ್ತಿರುವುದಕ್ಕೆ ಈ ಪ್ರಶಸ್ತಿಯನ್ನು ನೀಡಲಾಗಿದೆ ಎಂದು ಪ್ರಶಸ್ತಿ ಪತ್ರದಲ್ಲಿ ತಿಳಿಸಲಾಗಿದೆ.

ಸಾರ್ವಜನಿಕ ಕಾರ್ಯಗಳಲ್ಲಿಯೂ ತಮ್ಮನ್ನು ತೊಡಗಿಸಿಕೊಂಡಿರುವ ಮುತ್ತು ಹಡಪದ ಅನೇಕ ಸಾಂಸ್ಕೃತಿಕ ಕಾರ್ಯಗಳಲ್ಲಿ ನಿರೂಪಣೆ ಮಾಡಿ ಸೈ ಎನ್ನಿಸಿಕೊಂಡಿದ್ದಾರೆ. 1998ರಲ್ಲಿ ಹಡಪದ ಅಪ್ಪಣ್ಣ ಸಮಾಜದ ನರೇಗಲ್ಲನ ಸದಸ್ಯರಾಗಿ ತಮ್ಮ ಸೇವೆ ಪ್ರಾರಂಭಿಸಿ, 2016ರಲ್ಲಿ ಜಿಲ್ಲಾ ಸಮಿತಿಯ ಸಂಘಟನಾ ಕಾರ್ಯದರ್ಶಿಯಾದರು. 2018ರಿಂದ ಗಜೇಂದ್ರಗಡ ತಾಲೂಕಾ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದು, ಈಗಾಗಲೇ 8 ಬಾರಿ ರಕ್ತದಾನ ಮಾಡಿ ತಮ್ಮ ಸಾಮಾಜಿಕ ಸೇವೆಯನ್ನು ಮುಂದುವರೆಸಿದ್ದಾರೆ. ಪ್ರಶಸ್ತಿ ಪುರಸ್ಕೃತರಾಗಿದ್ದಕ್ಕೆ ಮುತ್ತು ಅವರ ಅಭಿಮಾನಿಗಳು ಮತ್ತು ಸ್ನೇಹಿತರು ಅವರಿಗೆ ಶುಭ ಹಾರೈಸಿದ್ದಾರೆ.

## ಪರೀಕ್ಷಾ ಕೇಂದ್ರ ಬದಲಾವಣೆಗೆ ಒತ್ತಾಯಿಸಿ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಪರೀಕ್ಷಾ ಕೇಂದ್ರ ಬದಲಾವಣೆಗೆ ಒತ್ತಾಯಿಸಿ ಡಾ. ಪಿ.ಜಿ.ಎ.ಎಸ್. ಸಮಿತಿಯ ಶ್ರೀ ಕೆ.ಕೆ.ಪಿ.ಪಿ.ಜಿ. ಸಂಗೀತ ಶಾಲೆಯ ಸಿಬ್ಬಂದಿಗಳು ವಿ.ಪ ಸದಸ್ಯ ಎಸ್.ವಿ. ಸಂಕನೂರ ಅವರಿಗೆ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯ ಡಾ. ಕಲ್ಲಯ್ಯಜ್ಜನವರು ನೀಡಿದ ಮನವಿ ಪತ್ರವನ್ನು ಅರ್ಪಿಸಿದರು.

ಮನವಿ ಪತ್ರದಲ್ಲಿ ಮೈಸೂರಿನ ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ಲ ಸಂಗೀತ ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದವರು ರಾಜ್ಯ ಮಟ್ಟದ ವಿಶೇಷ ಸಂಗೀತ ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳನ್ನು

ಈ ಹಿಂದೆ ಬೆಂಗಳೂರಿನ ಕರ್ನಾಟಕ ಪ್ರೌಢಶಿಕ್ಷಣ ಮಂಡಳಿನಡೆಸುತ್ತಿದ್ದರು. ಪರೀಕ್ಷೆಗಳನ್ನು ನಡೆಸಲು ಆಯಾ ಜಿಲ್ಲಾ ಡಯಟ್ ಕೇಂದ್ರಗಳಿಗೆ ಒಪ್ಪಿಸಿದ್ದರು.

ಈಗ ದಿಢೀರನೆ ಡಾ. ಗಂಗೂಬಾಯಿ ಹಾನಗಲ್ಲ ವಿಶ್ವವಿದ್ಯಾಲಯದವರು ಈ ಬಾರಿಯ ಸಂಗೀತ ಪರೀಕ್ಷೆಗಳಿಗೆ ಲಿಖಿತ ಹಾಗೂ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳನ್ನು ಗದಗ ಜಿಲ್ಲೆಯನ್ನು ಬಿಟ್ಟು ಬೇರೆ ಬೇರೆ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಸಲಿದ್ದಾರೆ. ಶ್ರೀಮಠದ ಅಂಧರು, ಅಂಗವಿಕಲರು, ದೀನದಲಿತರು ಹಾಗೂ ಇತರ ಬಡ ಮಕ್ಕಳಿಗೂ ಇದರಿಂದ ತುಂಬಾ ಅನಾನುಕೂಲವಾಗುತ್ತದೆ.

ಆದ್ದರಿಂದ, ಈ ಹಿಂದೆ ನಡೆಸುತ್ತಾ ಬಂದಿರುವ ಗದಗ ಜಿಲ್ಲಾ ಕೇಂದ್ರದಲ್ಲಿಯೇ ಸಂಗೀತ/ತಾಳವಾದ್ಯ ಪರೀಕ್ಷೆಗಳನ್ನು ನಡೆಸಲು ಅನುಮತಿ ಕೊಡಿಸಲು ಸರ್ಕಾರಕ್ಕೆ ಮನವರಿಕೆ ಮಾಡಿಕೊಡಬೇಕೆಂದು ಮನವಿ ಮಾಡಿಕೊಂಡರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka